ಕನ್ನಡಪ್ರಭ

# ತಾಯಿ ಪ್ರೀತಿಗೆ ಬೆಲೆ ಕಟ್ಟಲಾಗದು: ಹೊರಟ್ಟಿ

## ದತ್ತಿನಿಧಿ ಪ್ರಶಸ್ತಿ ಪ್ರದಾನ, ಗ್ರಾಮೀಣಾಭಿವೃದ್ಧಿಯಲ್ಲಿ ಪತ್ರಿಕೋದ್ಯಮದ ಪಾತ್ರ ಕುರಿತು ವಿಚಾರಸಂಕಿರಣ

• **ಕನ್ನಡಪ್ರಭ ವಾರ್ತೆ** ಗದಗ

ತಾಯಿ ಪ್ರೀತಿಗೆ ಬೆಲೆ ಕಟ್ಟಲಾಗದು. ಪ್ರತಿಯೊಬ್ಬರೂ ತಂದೆ- ತಾಯಿಯನ್ನು ಪ್ರೀತಿ, ವಾತ್ಸಲ್ಯದಿಂದ ನೋಡಿಕೊಳ್ಳಬೇಕು ಎಂದು ವಿಧಾನ ಪರಿಷತ್ ಸಭಾಪತಿ ಬಸವರಾಜ ಹೊರಟ್ಟಿ ತಿಳಿಸಿದರು.

ನಗರದ ಹೊರವಲಯದಲ್ಲಿ ಗ್ರಾಮ ಗಂಗೋತ್ರಿ ಆವರಣದಲ್ಲಿರುವ ಮಹಾತ್ಮ ಗಾಂಧಿ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ವಿಶ್ವವಿದ್ಯಾಲಯದ ಕೌಶಲ್ಯ ವಿಕಾಸ ಭವನದ ಸಭಾಂಗಣದಲ್ಲಿ ಗುರುವಾರ ನಡೆದ ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘ ಜಿಲ್ಲಾ ಘಟಕದಲ್ಲಿ ಅವ್ವ ಸೇವಾ ಟ್ರಸ್ಟ್ ಮಾತೋಶ್ರೀ ಗಂಗವ್ವ ಶಿವಲಿಂಗಪ್ಪ ಹೊರಟ್ಟಿ ಸ್ಮರಣಾರ್ಥ ರಾಜ್ಯ ಮಟ್ಟದಲ್ಲಿ ಮಹಿಳಾ ಪತ್ರಕರ್ತರಿಗೆ ಪ್ರೋತ್ಸಾಹಿಸುವ ಉದ್ದೇಶದಿಂದ ಸ್ಥಾಪಿಸಿರುವ ದತ್ತಿನಿಧಿ ಪ್ರಶಸ್ತಿ ಪ್ರದಾನ ಹಾಗೂ ಗ್ರಾಮೀಣಾಭಿವೃದ್ಧಿಯಲ್ಲಿ ಪತ್ರಿಕೋದ್ಯಮದ ಪಾತ್ರ ಕುರಿತು ವಿಚಾರಸಂಕಿರಣ ಉದ್ಘಾಟಿಸಿ ಮಾತನಾಡಿದರು.

ಪತ್ರಕರ್ತರು ಪತ್ರಿಕೆಗಳ ಮೂಲಕ ಸಮಾಜದಲ್ಲಿ ಪರಿಣಾಮ ಬೀರುತ್ತಾರೆ. ಹೀಗಾಗಿ ಪತ್ರಿಕೆಗಳ ವರದಿ, ಮಾಹಿತಿ ಹಾಗೂ ಸಮಾಜದಲ್ಲಿ ಅತ್ಯುತ್ತಮ ಸೇವೆ ಮಾಡಿದವರನ್ನು ಗುರುತಿಸಿ ಪ್ರಶಸ್ತಿಗೆ ಆಯ್ಕೆ ಮಾಡಲಾಗುತ್ತಿದೆ. ಇದಕ್ಕೊಂದು ಪ್ರತ್ಯೇಕ ಸಮಿತಿ ರಚಿಸಿದ್ದೇವೆ.

ನಮ್ಮ ತಾಯಿಯ ಸ್ಮರಣೆಯ ಹಿನ್ನೆಲೆಯಲ್ಲಿ ಪ್ರತಿವರ್ಷ ಸಾಧಕರಿಗೆ ಪ್ರಶಸ್ತಿ ನೀಡಲಾಗುತ್ತಿದೆ ಎಂದರು.


ಕಾರ್ಯಕ್ರಮವನ್ನು ವಿಧಾನಪರಿಷತ್ ಸಭಾಪತಿ ಬಸವರಾಜ ಹೊರಟ್ಟಿ ಉದ್ಘಾಟಿಸಿದರು.

ಮುಖ್ಯಮಂತ್ರಿಗಳ ಮಾಧ್ಯಮ ಸಲಹೆಗಾರ ಕೆ.ವಿ. ಪ್ರಭಾಕರ ಮಾತನಾಡಿ, ಅವ್ವನ ಹೆಸರಿನಲ್ಲಿ ಪ್ರಶಸ್ತಿ ನೀಡುತ್ತಿರುವುದು ರಾಜ್ಯಕ್ಕೆ ಮಾದರಿಯಾಗಿದೆ. ಎಷ್ಟೇ ದೊಡ್ಡ ಸ್ಥಾನಕ್ಕೇರಲಿ, ತಾಯಿಗಿಂತ ದೊಡ್ಡದು ಯಾವುದೂ ಇಲ್ಲ. ಅವ್ವ ನಮ್ಮೆಲ್ಲರ ಸಾಧನೆ, ಯಶಸ್ಸಿಗೆ ಸ್ಫೂರ್ತಿ ಎಂದರು.

ಗ್ರಾಮೀಣಾಭಿವೃದ್ಧಿಗೆ ಪತ್ರಿಕೋದ್ಯಮ ಸೇತುವೆಯಾಗಿ ಕೆಲಸಮಾಡಬೇಕಿದೆ. ಪತ್ರಿಕೋದ್ಯಮ ಮೇಲ್ಪಟ್ಟದ ಆರ್ಥಿಕ ಪ್ರಗತಿಗಿಂತ ಹೆಚ್ಚಾಗಿ, ಹಳ್ಳಿಗಳ ಜನರ ಆರೋಗ್ಯ, ಶಿಕ್ಷಣ ಮತ್ತು ಕುಡಿಯುವ ನೀರಿನ ಲಭ್ಯತೆಯ ಬಗ್ಗೆ ಗಮನ ಹರಿಸಬೇಕಿದೆ.

ಮುಖ್ಯಮಂತ್ರಿಗಳು ಯಾವುದೇ ಜಿಲ್ಲೆಯಲ್ಲಿ ಸಭೆಗಳನ್ನು ನಡೆಸುವಾಗ ಆಯಾ ಜಿಲ್ಲೆಗಳ ಗ್ರಾಮೀಣ ಬದುಕಿನ ಬಗ್ಗೆ ಪತ್ರಿಕೆಗಳಲ್ಲಿ ಬಂದಿರುವ ವರದಿಗಳನ್ನು ಮೊದಲು ಗಮನಿಸುತ್ತಾರೆ ಎಂದರು.

ಆ ಕುರಿತು ಸಂಬಂಧಪಟ್ಟ ಇಲಾಖೆಗಳ ಅಧಿಕಾರಿಗಳನ್ನು ಮುಖ್ಯಮಂತ್ರಿಗಳು ತರಾಟೆಗೆ ತೆಗೆದುಕೊಳ್ಳುವುದನ್ನು ನೀವೂ ಗಮನಿಸುತ್ತೀರಿ. ಕಲುಷಿತ ನೀರು ಕುಡಿದು ಸಾವಿಗೀಡಾದ ವರದಿಗಳು ಸರ್ಕಾರವನ್ನು ಎಚ್ಚರಿಸಿವೆ. ಬೆಳೆಹಾನಿ ಬಗ್ಗೆ ಬಂದ ವರದಿಗಳು ಸಾವಿರಾರು ರೈತ ಕುಟುಂಬಗಳಿಗೆ ಪರಿಹಾರ ಒದಗಿಸಲು ನೆರವಾಗಿವೆ. ಪತ್ರಕರ್ತರು, ಪತ್ರಿಕೋದ್ಯಮದ ವಿದ್ಯಾರ್ಥಿಗಳು ಹಳ್ಳಿಗಳಿಗೆ ಹೋಗಿ ಜನರ ಸಂಕಷ್ಟಗಳನ್ನು ಆಲಿಸುವುದು, ಸ್ಟುಡಿಯೋಗಳಲ್ಲಿ ಕುಳಿತು ಚರ್ಚೆ ಮಾಡುವುದಕ್ಕಿಂತ ಹೆಚ್ಚು ಉಪಯುಕ್ತ ಎನ್ನುವುದನ್ನು ಅರಿಯಬೇಕಿದೆ ಎಂದರು.

ಕಕಾಪಸಂ ಜಿಲ್ಲಾಧ್ಯಕ್ಷ ರಾಜು ಎಂ. ಹೆಬ್ಬಳ್ಳಿ ಅಧ್ಯಕ್ಷತೆ ವಹಿಸಿದ್ದರು. ಈ ವೇಳೆ ದತ್ತಿ ನಿಧಿಯ 2025- 26ನೇ ಸಾಲಿನ ಪ್ರಶಸ್ತಿಯನ್ನು ಸಂಯುಕ್ತ ಕರ್ನಾಟಕ ಪತ್ರಿಕೆಯ ಹಿರಿಯ ಉಪಸಂಪಾದಕಿ ತನುಜಾ ನಾಯಕ ಅವರಿಗೆ ನೀಡಿ ಗೌರವಿಸಲಾಯಿತು.

> ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘದ ಜಿಲ್ಲಾ ಘಟಕದ ಪತ್ರಿಕಾ ಭವನದ ಮೊದಲ ಮಹಡಿಗೆ ₹5 ಲಕ್ಷ ಅನುದಾನ ನೀಡಲಾಗುವುದು.
> • **ಬಸವರಾಜ ಹೊರಟ್ಟಿ** ಸಭಾಪತಿ

> ಪತ್ರಕರ್ತರು, ಪತ್ರಿಕೋದ್ಯಮದ ವಿದ್ಯಾರ್ಥಿಗಳು ಹಳ್ಳಿಗಳಿಗೆ ಹೋಗಿ ಜನರ ಸಂಕಷ್ಟಗಳನ್ನು ಆಲಿಸುವುದು, ಸ್ಟುಡಿಯೋಗಳಲ್ಲಿ ಕುಳಿತು ಚರ್ಚೆ ಮಾಡುವುದಕ್ಕಿಂತ ಹೆಚ್ಚು ಉಪಯುಕ್ತ ಎನ್ನುವುದನ್ನು ಅರಿಯಬೇಕಿದೆ.
> • **ಕೆ.ವಿ. ಪ್ರಭಾಕರ** ಸಿಎಂ ಮಾಧ್ಯಮ ಸಲಹೆಗಾರ

ವಿವಿ ಕುಲಪತಿ (ಪ್ರ.) ಪ್ರೊ. ಸುರೇಶ ನಾಡಗೌಡರ, ಕಕಾಪಸಂ ರಾಜ್ಯ ಕಾರ್ಯದರ್ಶಿ ನಿಂಗಪ್ಪ ಚಾವಡಿ, ಜಿಲ್ಲಾ ಮಟ್ಟದ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರ ಅಧ್ಯಕ್ಷ ಬಿ.ಬಿ. ಅಸೂಟಿ, ಅವ್ವ ಸೇವಾ ಟ್ರಸ್ಟ್ ಜಿಲ್ಲಾ ಸಂಚಾಲಕ ಬಸವರಾಜ ಧಾರವಾಡ, ಜಿಲ್ಲಾ ವಾರ್ತಾಧಿಕಾರಿ ವಸಂತ ಮಡ್ಲೂರು, ಅರುಣಕುಮಾರ ಹಿರೇಮಠ, ಶರಣು ಗೊಡ್ಡೂರ ಸೇರಿದಂತೆ ಸಂಘದ ಪದಾಧಿಕಾರಿಗಳು, ಜಿಲ್ಲೆಯ ಪತ್ರಕರ್ತರು, ವಿದ್ಯಾರ್ಥಿಗಳು ಇದ್ದರು.

# ಕನ್ನಡಪ್ರಭ



ಗದುಗಿನ ಗ್ರಾಮೀಣಾಭಿವೃದ್ಧಿ ವಿವಿಯಲ್ಲಿ ಗುರುವಾರ ಕಾರ್ಯನಿರತ ಪತ್ರಕರ್ತರ ಸಂಘ ಜಿಲ್ಲಾ ಘಟಕದಲ್ಲಿ ಅಪ್ಪ
ಸೇವಾ ಟ್ರಸ್ಟ್ ಮಾತೋಶ್ರೀ ಗಂಗವ್ವ ಶಿವಲಿಂಗಪ್ಪ ಹೊರಟ್ಟಿ ಸ್ಮರಣಾರ್ಥ ದತ್ತಿ ನಿಧಿ ಪ್ರಶಸ್ತಿಯನ್ನು ಸಂಯುಕ್ತ
ಕರ್ನಾಟಕ ಪತ್ರಿಕೆಯ ಹಿರಿಯ ಉಪಸಂಪಾದಕಿ ತನುಜಾ ನಾಯಕ ಅವರಿಗೆ ನೀಡಿ ಗೌರವಿಸಲಾಯಿತು.

ರಾಷ್ಟ್ರ ಜಾಗೃತಿಯ ದೈನಿಕ
ಹೊಸ ದಿಗಂತ
11
27 Feb 2026

## ಮುಖ್ಯಮಂತ್ರಿಗಳ ಮಾಧ್ಯಮ ಸಲಹೆಗಾರ ಕೆ.ವಿ. ಪ್ರಭಾಕರ ಅಭಿಮತ

# ಅವ್ವನ ಹೆಸರಿನ ಕಾರ್ಯಕ್ರಮ ಮಾದರಿ

**ಗದಗ:** ತಮ್ಮ ಸುಖ ತ್ಯಾಗ ಮಾಡಿದ ತಾಯಿ-ತಂದೆಯರನ್ನು ವೃದ್ಧಾಶ್ರಮ ಕಾಣುವಂತಾಗಿರುವುದು ಬೇಸರದ ಸಂಗತಿ. ಆದರೆ ವಿಧಾನ ಪರಿಷತ್ ಸಭಾಪತಿ ಬಸವರಾಜ ಹೊರಟ್ಟಿ ಅವರು ತಾಯಿ ಹೆಸರಲ್ಲಿ ಅವ್ವ ಸೇವಾ ಟ್ರಸ್ಟ್ ಸ್ಥಾಪಿಸಿ ಆ ಮೂಲಕ ಸಮಾಜದಲ್ಲಿ ವಿವಿಧ ಕಾರ್ಯಕ್ರಮಗಳ ಆಯೋಜನೆಗೆ ಕಾರಣೀಕರ್ತರಾಗಿರುವುದು ಮಾದರಿ ಎಂದು ಎಂದು ಮುಖ್ಯಮಂತ್ರಿಗಳ ಮಾಧ್ಯಮ ಸಲಹೆಗಾರ ಕೆ.ವಿ.ಪ್ರಭಾಕರ್ ಶ್ಲಾಘಿಸಿದರು.

ಕಾರ್ಯನಿರತ ಪತ್ರಕರ್ತರ ಸಂಘದ ಜಿಲ್ಲಾ ಘಟಕದಲ್ಲಿ ಹುಬ್ಬಳ್ಳಿಯ ಅವ್ವ ಸೇವಾ ಟ್ರಸ್ಟ್ ಮಾತೋಶ್ರೀ ಗಂಗವ್ವ ಶಿವಲಿಂಗಪ್ಪ ಹೊರಟ್ಟಿ ಸ್ಮರಣಾರ್ಥ ರಾಜ್ಯ ಮಟ್ಟದಲ್ಲಿ ಮಹಿಳಾ ಪತ್ರಕರ್ತರಿಗೆ ಪ್ರೋತ್ಸಾಹಿಸುವ ಉದ್ದೇಶದಿಂದ ಸ್ಥಾಪಿಸಿರುವ ದತ್ತಿ ನಿಧಿ ಪ್ರಶಸ್ತಿ ನಗರದ ಹೊರವಲಯದಲ್ಲಿರುವ ಗ್ರಾಮ ಗಂಗೋತ್ರಿ, ಆವರಣದಲ್ಲಿರುವ ಮಹಾತ್ಮ ಗಾಂಧಿ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ವಿಶ್ವವಿದ್ಯಾಲಯುದ ಕೌಶಲ್ಯ ವಿಕಾಸ ಭವನದ ಸಭಾಂಗಣದಲ್ಲಿ ಗುರುವಾರ ನಡೆದ ಕಾರ್ಯಕ್ರಮದಲ್ಲಿ ಪತ್ರಕರ್ತೆ ತನುಜಾ ನಾಯಕ ಅವರಿಗೆ ಪ್ರದಾನ ಮಾಡಿ ಮಾತನಾಡಿದರು.

ಮಾತೋಶ್ರೀ ಗುರುವ್ವ ಶಿವಲಿಂಗಪ್ಪ ಅವ್ವ ಹೊರಟ್ಟಿ ಈ ಕಾರ್ಯಕ್ರಮದ ನೈತಿಕ ಶಕ್ತಿ ಆಗಿದ್ದಾರೆ. ಈ ತಾಯಿಯ ಕಾಳಜಿ, ಸಂಸ್ಕಾರ ಮತ್ತು ಕನವರಿಕೆಗಳನ್ನು ಅಕ್ಷರಕ್ಕೆ ಇಳಿಸುತ್ತಾ ಇವರ ಹೆಸರಿನ ಪ್ರಶಸ್ತಿ ಸ್ವೀಕರಿಸುತ್ತಿರುವ ಸುನಂದಾ ನಾಯಕ ಅವರ ಆಯ್ಕೆ ಅತ್ಯಂತ ಸೂಕ್ತವಾಗಿದೆ ಎಂದರು. ಇವತ್ತಿನ ಈ ಕಾರ್ಯಕ್ರಮವೇ ಅವ್ವ ಗುರವ್ವ ಅವರ ಸಂಸ್ಕಾರ ಮತ್ತು ಚೈತನ್ಯ ಚೇವಂತಿಕೆಗೆ ಸಾಕ್ಷಿಯಾಗಿದೆ ಎಂದು ವಿವರಿಸಿದರು.

ನಿಜವಾದ ಅಭಿವೃದ್ಧಿ ಎಂದರೆ ಗ್ರಾಮೀಣ ಭಾಗದ ಜನರ ಜೀವನಮಟ್ಟ ಸುಧಾರಿಸುವುದು ಮತ್ತು ಗ್ರಾಮೀಣ ಆರ್ಥಿಕತೆ ಬೆಳವಣಿಗೆಯೇ ನಿಜವಾದ ಅಭಿವೃದ್ಧಿ ಎನ್ನುವುದನ್ನು ನಾವು ಮರೆಯಬಾರದು ಎಂದರು.

ಈ ಸಂದರ್ಭದಲ್ಲಿ ಜಿಲ್ಲಾಧ್ಯಕ್ಷ ರಾಜು ಹೆಬ್ಬಳ್ಳಿ ಅಧ್ಯಕ್ಷತೆ ವಹಿಸಿದ್ದರು. ಸಭಾಪತಿ ಬಸವರಾಜ ಹೊರಟ್ಟಿ, ಕುಲಸಚಿವ ಪ್ರೊ.ಸುರೇಶ ನಾಡಗೌಡರ, ರಾಜ್ಯ ಕಾರ್ಯದರ್ಶಿ ನಿಂಗಪ್ಪ ಚಾವಡಿ, ಬಸವರಾಜ ಧಾರವಾಡ, ದತ್ತಿ ನಿಧಿ ಪ್ರಶಸ್ತಿ ಪುರಸ್ಕೃತ ತನುಜಾ ನಾಯಕ, ಜಿಲ್ಲಾ ವಾರ್ತಾಧಿಕಾರಿ ವಸಂತ ಮಡ್ಲೂರು ಇದ್ದರು.



### ಕಿರಿಯ ವೃತ್ತಿ ಬಾಂಧವರಿಗೆ ಮಾದರಿ

ಆದರ್ಶಪ್ರಾಯ ಅವ್ವನ ಹೆಸರಿನ ಪ್ರಶಸ್ತಿಗೆ ತನುಜಾ ನಾಯಕ ಅವರನ್ನು ಆಯ್ಕೆ ಮಾಡಿರುವುದು ಹೆಚ್ಚು ಸೂಕ್ತವಾಗಿದೆ. ಮಹಿಳಾ ಸಂವೇದನೆ, ಕೌಟುಂಬಿಕ ಮೌಲ್ಯಗಳು, ಸಾಮಾಜಿಕ ಜಾಗೃತಿ ಮತ್ತು ಜೀವನ ಪ್ರೀತಿಯನ್ನು ಸಾರುವಂತಹ ಲೇಖನಗಳನ್ನು ನಿರಂತರವಾಗಿ ಬರೆಯುತ್ತಿರುವ ತನುಜಾ ನಾಯಕ ಅವರ ಸಾಮಾಜಿಕ ನೋಟ ಇವತ್ತಿನ ಕಿರಿಯ ವೃತ್ತಿ ಬಾಂಧವರಿಗೆ ಮಾದರಿಯಾಗಿದ್ದಾರೆ ಎಂದು ಮುಖ್ಯಮಂತ್ರಿಗಳ ಮಾಧ್ಯಮ ಸಲಹೆಗಾರ ಕೆ.ವಿ.ಪ್ರಭಾಕರ ಹೇಳಿದರು.

ರಾಷ್ಟ್ರ ಜಾಗೃತಿಯ ದೈನಿಕ
ಹೊಸ ದಿಗಂತ
12
27 Feb 2026

## ಪತ್ರಕರ್ತೆ ತನುಜಾ ನಾಯಕಗೆ ಅವ್ವ ಪ್ರಶಸ್ತಿ ಪ್ರದಾನ

# ತಾಯಿ ಪ್ರೀತಿಗೆ ಬೆಲೆ ಕಟ್ಟಲಾಗದು: ಹೊರಟ್ಟಿ

**ಗದಗ:** ತಾಯಿ ಪ್ರೀತಿಗೆ ಬೆಲೆ ಕಟ್ಟಲಾಗದು. ಹೀಗಾಗಿ ಪ್ರತಿಯೊಬ್ಬರೂ ತಮ್ಮ ತಂದೆ-ತಾಯಿಯನ್ನು ಪ್ರೀತಿ, ವಾತ್ಸಲ್ಯದಿಂದ ನೋಡಿಕೊಳ್ಳಿ ಎಂದು ವಿಧಾನ ಪರಿಷತ್ ಸಭಾಪತಿ ಬಸವರಾಜ ಹೊರಟ್ಟಿ ಹೇಳಿದರು.

ನಗರದ ಗಂಗೋತ್ರಿ ಆವರಣದಲ್ಲಿರುವ ಮಹಾತ್ಮ ಗಾಂಧಿ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ವಿಶ್ವವಿದ್ಯಾಲಯದ ಕೌಶಲ್ಯ ವಿಕಾಸ ಭವನದ ಸಭಾಂಗಣದಲ್ಲಿ ಗುರುವಾರ ನಡೆದ ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘ ಜಿಲ್ಲಾ ಘಟಕದಲ್ಲಿ ಅವ್ವ ಸೇವಾ ಟ್ರಸ್ಟ್ ಮಾತೋಶ್ರೀ ಗಂಗವ್ವ ಶಿವಲಿಂಗಪ್ಪ ಹೊರಟ್ಟಿ ಸ್ಮರಣಾರ್ಥ ರಾಜ್ಯ ಮಟ್ಟದಲ್ಲಿ ಮಹಿಳಾ ಪತ್ರಕರ್ತರಿಗೆ ಪ್ರೋತ್ಸಾಹಿಸುವ ಉದ್ದೇಶದಿಂದ ಸ್ಥಾಪಿಸಿರುವ ದತ್ತಿ ನಿಧಿ ಪ್ರಶಸ್ತಿ ಪ್ರದಾನ ಹಾಗೂ ಗ್ರಾಮೀಣಾಭಿವೃದ್ಧಿಯಲ್ಲಿ ಪತ್ರಿಕೋದ್ಯಮದ ಪಾತ್ರ ಕುರಿತು ವಿಚಾರ ಸಂಕಿರಣ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದರು.

ಪತ್ರಕರ್ತರು ಪತ್ರಿಕೆಗಳ ಮೂಲಕ ಸಮಾಜದಲ್ಲಿ ಪರಿಣಾಮ ಬೀರುತ್ತಾರೆ. ಹೀಗಾಗಿ ಪತ್ರಿಕೆಗಳ ವರದಿ, ಮಾಹಿತಿ ಹಾಗೂ ಸಮಾಜದಲ್ಲಿ ಅತ್ಯುತ್ತಮ ಸೇವೆ ಮಾಡಿದವರನ್ನು ಗುರುತಿಸಿ ಪ್ರಶಸ್ತಿಗೆ ಆಯ್ಕೆ ಮಾಡಲಾಗುತ್ತಿದೆ. ಇದಕ್ಕೊಂದು ಪ್ರತ್ಯೇಕ ಸಮಿತಿ ರಚಿಸಿದ್ದೇವೆ. ನಮ್ಮ ತಾಯಿಯ ಸ್ಮರಣೆಯ ಹಿನ್ನೆಲೆಯಲ್ಲಿ ಪ್ರತಿವರ್ಷ ಸಾಧಕರಿಗೆ ಪ್ರಶಸ್ತಿ ನೀಡಲಾಗುತ್ತಿದೆ ಎಂದರು.

ಪ್ರಶಸ್ತಿ ಪ್ರದಾನ ಮಾಡಿದ ಮುಖ್ಯಮಂತ್ರಿಗಳ ಮಾಧ್ಯಮ ಸಲಹೆಗಾರ ಕೆ.ವಿ.ಪ್ರಭಾಕರ ಮಾತನಾಡಿ, ಅವ್ವನ ಹೆಸರಿನಲ್ಲಿ ಪ್ರಶಸ್ತಿ ನೀಡುತ್ತಿರುವುದು ರಾಜ್ಯಕ್ಕೆ ಮಾದರಿಯಾಗಿದೆ.



### ‘ಅವ್ವ ದತ್ತಿ ನಿಧಿ’ ಪ್ರಶಸ್ತಿ

ಹುಬ್ಬಳ್ಳಿಯ ಅವ್ವ ಸೇವಾ ಟ್ರಸ್ಟ್, ಜಿಲ್ಲಾ ಕಾರ್ಯನಿರತ ಪತ್ರಕರ್ತರ ಸಂಘದಲ್ಲಿ ಮಾತೋಶ್ರೀ ಗುರವ್ವ ಶಿವಲಿಂಗಪ್ಪ ಹೊರಟ್ಟಿ ಸ್ಮರಣಾರ್ಥ ಸ್ಥಾಪಿಸಿರುವ ದತ್ತಿ ನಿಧಿಯ 2025-26ನೇ ಸಾಲಿನ ಪ್ರಶಸ್ತಿಗೆ ‘ಸಂಯುಕ್ತ ಕರ್ನಾಟಕ’ ಪತ್ರಿಕೆಯ ಹಿರಿಯ ಉಪಸಂಪಾದಕಿ ತನುಜಾ ನಾಯಕ ಅವರಿಗೆ ನೀಡಿ, ಗೌರವಿಸಲಾಯಿತು.

ಎಷ್ಟೇ ದೊಡ್ಡ ಸ್ಥಾನಕ್ಕೇರಲಿ ತಾಯಿಗಿಂತ ದೊಡ್ಡದು ಯಾವುದೂ ಇಲ್ಲ. ‘ಅವ್ವ’ ನಮ್ಮೆಲ್ಲರ ಸಾಧನೆ, ಯಶಸ್ಸಿಗೆ ಸ್ಫೂರ್ತಿ ಎಂದು ಹೇಳಿದರು.

ಅಧ್ಯಕ್ಷತೆ ವಹಿಸಿದ್ದ ಕಾರ್ಯನಿರತ ಪತ್ರಕರ್ತರ ಸಂಘದ ಜಿಲ್ಲಾಧ್ಯಕ್ಷ ರಾಜು ಹೆಬ್ಬಳ್ಳಿ ಮಾತನಾಡಿದರು. ಕುಲಸಚಿವ ಪ್ರೊ.ಸುರೇಶ ನಾಡಗೌಡರ, ಕರ್ನಾಟಕ

> **“ ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘದ ಗದಗ ಜಿಲ್ಲಾ ಘಟಕದ ಪತ್ರಿಕಾ ಭವನದ ಮೊದಲ ಮಹಡಿಗೆ ಐದು ಲಕ್ಷ ರೂ. ಅನುದಾನ ನೀಡಲಾಗುವುದು.**
>
> ■ ಬಸವರಾಜ ಹೊರಟ್ಟಿ, ಸಭಾಪತಿ

ಕಾರ್ಯನಿರತ ಪತ್ರಕರ್ತರ ಸಂಘದ ರಾಜ್ಯ ಕಾರ್ಯದರ್ಶಿ ನಿಂಗಪ್ಪ ಚಾವಡಿ, ಜಿಲ್ಲಾಮಟ್ಟದ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರ ಅಧ್ಯಕ್ಷ ಬಿ.ಬಿ.ಅಸೂಟಿ, ಅವ್ವ ಸೇವಾ ಟ್ರಸ್ಟ್ ಜಿಲ್ಲಾ ಸಂಚಾಲಕ ಬಸವರಾಜ ಧಾರವಾಡ, ಜಿಲ್ಲಾ ವಾರ್ತಾಧಿಕಾರಿ ವಸಂತ ಮಡ್ಲೂರು, ಕಾ.ನಿ.ಪ ಸಂಘದ ರಾಜ್ಯ ಕಾರ್ಯಕಾರಣಿ ಸದಸ್ಯ ಅರುಣಕುಮಾರ ಹಿರೇಮಠ, ಜಿಲ್ಲಾ ಪ್ರಧಾನ ಕಾರ್ಯದರ್ಶಿ ಶರಣು ದೊಡ್ಡೂರ ಇದ್ದರು.

# ಸಂ.ಕ. ಪತ್ರಕರ್ತೆ ತನುಜಾಗೆ ಅವ್ವ ಸೇವಾ ಪ್ರಶಸ್ತಿ ಪ್ರದಾನ

**ಸಂ.ಕ.ಸಮಾಚಾರ ಗದಗ**

ಪತ್ರಕರ್ತರು ಕೇವಲ ರಾಜಕೀಯ ವ್ಯಕ್ತಿಗಳು, ಅಧಿಕಾರಿಗಳ ಸುತ್ತ ಗಿರಕಿ ಹೊಡೆಯುವದನ್ನು ಬಿಟ್ಟು, ಸಮಾಜದ ಹಿತಕ್ಕೆ ಪೂರಕವಾಗುವ ಸುದ್ದಿಗಳನ್ನು ಬರೆಯಬೇಕು ಎಂದು ವಿಧಾನ ಪರಿಷತ್ ಸಭಾಪತಿ ಬಸವರಾಜ ಹೊರಟ್ಟಿ ಕರೆ ನೀಡಿದರು.



ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘದಾಶ್ರಯದಲ್ಲಿ ಸಭಾಪತಿ ಬಸವರಾಜ ಹೊರಟ್ಟಿ ಅವ್ವ ಸೇವಾ ಟ್ರಸ್ಟ್‌ನಿಂದ ಮಹಿಳಾ ಪತ್ರಕರ್ತರನ್ನು ಪ್ರೋತ್ಸಾಹಿಸುವ ಹಿನ್ನೆಲೆಯಲ್ಲಿ ಸ್ಥಾಪಿಸಿರುವ ದತ್ತಿ ನಿಧಿ ಪ್ರಶಸ್ತಿಯನ್ನು ಸಂಯುಕ್ತ ಕರ್ನಾಟಕ ದಿನಪತ್ರಿಕೆಯ ಹಿರಿಯ ಉಪಸಂಪಾದಕಿ ತನುಜಾ ನಾಯಕರಿಗೆ ಪ್ರದಾನ ಮಾಡಿ ಮಾತನಾಡಿದರು.

ಪ್ರಸ್ತುತ ಪತ್ರಿಕೋದ್ಯಮ ಕವಲು ದಾರಿಯಲ್ಲಿದೆ. ಪತ್ರಕರ್ತರು ಪತ್ರಿಕೋದ್ಯಮಿಗಳ ಕೈಯಲ್ಲಿ ಸಿಲುಕಿ ನಲುಗುತ್ತಿದ್ದಾರೆ. ಪತ್ರಕರ್ತರಿಗೆ ಸೇವಾ ಭದ್ರತೆ ಇಲ್ಲದಂತಾಗಿದೆ. ಪತ್ರಕರ್ತರ ಜೀವನ ಸುಲಭವಾಗಿಲ್ಲ. ಅವರು ಸತತ ಅಧ್ಯಯನಶೀಲತೆ ಬೆಳೆಸಿಕೊಳ್ಳಬೇಕು ಎಂದು ಸಲಹೆ ನೀಡಿದರು.

ವಿಧಾನ ಪರಿಷತ್ ಸಭಾಪತಿ ಬಸವರಾಜ ಹೊರಟ್ಟಿ, ಮುಖ್ಯಮಂತ್ರಿಗಳ ಮಾಧ್ಯಮ ಸಲಹೆಗಾರ ಕೆ.ವಿ.ಪ್ರಭಾಕರ ದತ್ತಿ ನಿಧಿ ಪ್ರಶಸ್ತಿಯನ್ನು ಸಂಯುಕ್ತ ಕರ್ನಾಟಕ ದಿನಪತ್ರಿಕೆಯ ಹಿರಿಯ ಉಪಸಂಪಾದಕಿ ತನುಜಾ ನಾಯಕರಿಗೆ ಪ್ರದಾನ ಮಾಡಿದರು. ಮುಖ್ಯಮಂತ್ರಿಗಳ ಮಾಧ್ಯಮ ಸಲಹೆಗಾರ ಕೆ.ವಿ.ಪ್ರಭಾಕರ, ಮಹಾತ್ಮ ಗಾಂಧಿ ಗ್ರಾಮೀಣಾಭಿವೃದ್ಧಿ ಹಾಗೂ ಪಂಚಾಯತ್ ರಾಜ್ ವಿಶ್ವವಿದ್ಯಾಲಯದ ಕುಲಪತಿ ಡಾ.ಸುರೇಶ ನಾಡಗೌಡರ ಪ್ರಾಸ್ತಾವಿಕವಾಗಿ ಮಾತನಾಡಿದರು. ಕರ್ನಾಟಕ ರಾಜ್ಯ ಕಾರ್ಯನಿರತ ಪತ್ರಕರ್ತರ ಸಂಘದ ಜಿಲ್ಲಾಧ್ಯಕ್ಷ ರಾಜೂ ಹೆಬ್ಬಳ್ಳಿ ಅಧ್ಯಕ್ಷತೆ ವಹಿಸಿದ್ದರು.

ಪತ್ರಕರ್ತೆ ತನುಜಾ ನಾಯಕಗೆ ಅವ್ವ ಸೇವಾ ಟ್ರಸ್ಟ್‌ನಿಂದ ಪ್ರಶಸ್ತಿ ಪ್ರದಾನ । ಸಭಾಪತಿ ಹೊರಟ್ಟಿ ಅಭಿಪ್ರಾಯ

# ತಾಯಿ ಪ್ರೀತಿಗೆ ಬೆಲೆ ಕಟ್ಟಲು ಸಾಧ್ಯವಿಲ್ಲ



ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘದ ಜಿಲ್ಲಾ ಘಟಕ ಆಶ್ರಯದಲ್ಲಿ ಅವ್ವ ಸೇವಾ ಟ್ರಸ್ಟ್ ಮಾತೋಶ್ರೀ ಗಂಗವ್ವ ಶಿವಲಿಂಗಪ್ಪ ಹೊರಟ್ಟಿ ಸ್ಮರಣಾರ್ಥ ಸ್ಥಾಪಿಸಿರುವ 'ದತ್ತಿ ನಿಧಿ' ಪ್ರಶಸ್ತಿ ಪ್ರದಾನ ಸಮಾರಂಭವನ್ನು ಸಭಾಪತಿ ಬಸವರಾಜ ಹೊರಟ್ಟಿ ಉದ್ಘಾಟಿಸಿದರು.

> ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘದ ಜಿಲ್ಲಾ ಘಟಕದ ಪತ್ರಿಕಾ ಭವನದ ಮೊದಲ ಮಹಡಿಗೆ ಐದು ಲಕ್ಷ ರೂ. ಅನುದಾನ ನೀಡಲಾಗುವುದು.
>
> ■ ಬಸವರಾಜ ಹೊರಟ್ಟಿ,
> । ವಿಧಾನ ಪರಿಷತ್ ಸಭಾಪತಿ

## ತನುಜಾ ನಾಯಕಗೆ 'ದತ್ತಿ ನಿಧಿ' ಪ್ರಶಸ್ತಿ

ಹುಬ್ಬಳ್ಳಿಯ ಅವ್ವ ಸೇವಾ ಟ್ರಸ್ಟ್, ಜಿಲ್ಲಾ ಕಾರ್ಯನಿರತ ಪತ್ರಕರ್ತರ ಸಂಘದಲ್ಲಿ ಮಾತೋಶ್ರೀ ಗುರವ್ವ ಶಿವಲಿಂಗಪ್ಪ ಹೊರಟ್ಟಿ ಸ್ಮರಣಾರ್ಥ ಸ್ಥಾಪಿಸಿರುವ ದತ್ತಿ ನಿಧಿಯ ಪ್ರಶಸ್ತಿಗೆ 'ಸಂಯುಕ್ತ ಕರ್ನಾಟಕ' ಪತ್ರಿಕೆಯ ಹಿರಿಯ ಉಪಸಂಪಾದಕಿ ತನುಜಾ ನಾಯಕ ಅವರಿಗೆ ನೀಡಿ, ಗೌರವಿಸಲಾಯಿತು.

**ಗದಗ:** ತಾಯಿ ಪ್ರೀತಿ ಬೆಲೆ ಕಟ್ಟಲಾಗದು. ಪ್ರತಿಯೊಬ್ಬರೂ ತಮ್ಮ ತಂದೆ-ತಾಯಿಯನ್ನು ಪ್ರೀತಿ, ವಾತ್ಸಲ್ಯದಿಂದ ನೋಡಿಕೊಳ್ಳುವದು ಇಂದಿನ ಅಗತ್ಯವಾಗಿದೆಯೆಂದು ವಿಧಾನ ಪರಿಷತ್ ಸಭಾಪತಿ ಬಸವರಾಜ ಹೊರಟ್ಟಿ ಹೇಳಿದರು.

ನಾಗಾವಿಯ ಮಹಾತ್ಮ ಗಾಂಧಿ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ವಿಶ್ವವಿದ್ಯಾಲಯದಲ್ಲಿ ಗುರುವಾರ ನಡೆದ ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘದ ಜಿಲ್ಲಾ ಘಟಕದಲ್ಲಿ ಅವ್ವ ಸೇವಾ ಟ್ರಸ್ಟ್ ಮಾತೋಶ್ರೀ ಗಂಗವ್ವ ಶಿವಲಿಂಗಪ್ಪ ಹೊರಟ್ಟಿ ಸ್ಮರಣಾರ್ಥ ಸ್ಥಾಪಿಸಿರುವ 'ದತ್ತಿ ನಿಧಿ'ಪ್ರಶಸ್ತಿ ಪ್ರದಾನ, ಗ್ರಾಮೀಣಾಭಿವೃದ್ಧಿಯಲ್ಲಿ ಪತ್ರಿಕೋದ್ಯಮದ ಪಾತ್ರ ಕುರಿತು ವಿಚಾರ ಸಂಕಿರಣ ಉದ್ಘಾಟಿಸಿ ಮಾತನಾಡಿದ ಅವರು, ಪತ್ರಕರ್ತರು ಪತ್ರಿಕೆಗಳ ಮೂಲಕ ಸಮಾಜದಲ್ಲಿ ಪರಿಣಾಮ ಬೀರುತ್ತಾರೆ. ಪತ್ರಿಕೆಗಳ ವರದಿ, ಮಾಹಿತಿ ಹಾಗೂ ಸಮಾಜದಲ್ಲಿ ಅತ್ಯುತ್ತಮ ಸೇವೆಗೆ ಗುರುತಿಸಿ ಪ್ರಶಸ್ತಿಗೆ ಆಯ್ಕೆ ಮಾಡಲಾಗುತ್ತಿದೆ. ನಮ್ಮ ತಾಯಿ ಸ್ಮರಣೆಯ ಹಿನ್ನೆಲೆಯಲ್ಲಿ ಪ್ರತಿವರ್ಷ ಸಾಧಕರಿಗೆ ಪ್ರಶಸ್ತಿ ನೀಡಲಾಗುತ್ತಿದೆ ಎಂದರು.

ಪ್ರಶಸ್ತಿ ಪ್ರದಾನ ಮಾಡಿದ ಮುಖ್ಯಮಂತ್ರಿಗಳ ಮಾಧ್ಯಮ ಸಲಹೆಗಾರ ಕೆ.ವಿ. ಪ್ರಭಾಕರ ಮಾತನಾಡಿ, ಅವ್ವನ ಹೆಸರಿನಲ್ಲಿ ಪ್ರಶಸ್ತಿ ನೀಡುತ್ತಿರುವುದು ರಾಜ್ಯಕ್ಕೆ ಮಾದರಿ. ಎಷ್ಟೇ ದೊಡ್ಡ ಸ್ಥಾನಕ್ಕೇರಲಿ, ತಾಯಿಗಿಂತ ದೊಡ್ಡದು ಯಾವುದೂ ಇಲ್ಲ. 'ಅವ್ವ' ನಮ್ಮೆಲ್ಲರ ಸಾಧನೆ, ಯಶಸ್ಸಿಗೆ ಸ್ಫೂರ್ತಿ ಎಂದರು.

ಅಧ್ಯಕ್ಷತೆ ವಹಿಸಿದ್ದ ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘದ ಜಿಲ್ಲಾಧ್ಯಕ್ಷ ರಾಜು ಎಂ. ಹೆಬ್ಬಳ್ಳಿ ಮಾತನಾಡಿ, ಸಚಿವ ಎಚ್.ಕೆ. ಪಾಟೀಲ ಗದುಗಿನಲ್ಲಿ ರಾಜ್ಯದಲ್ಲಿಯೇ ಮಾದರಿ ಪತ್ರಿಕಾ ಭವನ ನಿರ್ಮಿಸಿದ್ದಾರೆ. ಇದೀಗ ಮೊದಲ ಮಹಡಿಗೆ ಸಭಾಪತಿಗಳು ತಮ್ಮ ಪ್ರದೇಶಾಭಿವೃದ್ಧಿ ನಿಧಿಯಿಂದ ಅನುದಾನ ಮತ್ತು ಕೆ.ವಿ. ಪ್ರಭಾಕರ ಅವರು ಮುಖ್ಯಮಂತ್ರಿಗಳ ಮೂಲಕ ವಿಶೇಷ ಅನುದಾನ ಕೊಡಿಸುವ ಜತೆಗೆ ಜಿಲ್ಲೆಯ ಕ್ಷೇಮಾಭಿವೃದ್ಧಿ ನಿಧಿಗೆ ಅನುದಾನ ಕೊಡಿಸುವಂತೆ ಮನವಿ ಮಾಡಿದರು.

ಗ್ರಾಮೀಣಾಭಿವೃದ್ಧಿ ವಿವಿ ಕುಲಪತಿ ಪ್ರೊ.ಸುರೇಶ ನಾಡಗೌಡರ, ನಿಂಗಪ್ಪ ಚಾವಡಿ, ಬಿ.ಬಿ ಅಸೂಟಿ, ಬಸವರಾಜ ಧಾರವಾಡ, ಜಿಲ್ಲಾ ವಾರ್ತಾಧಿಕಾರಿ ವಸಂತ ಮಡ್ಲೂರು, ಅರುಣಕುಮಾರ ಹಿರೇಮಠ, ಶರಣು ದೊಡ್ಡೂರ, ಡಿಡಿಪಿಐ ಆರ್.ಎಸ್.ಬುರುಡಿ, ಶಿಕ್ಷಣ ತಜ್ಞ ಡಾ.ಬಸವರಾಜ ಧಾರವಾಡ, ಜಿ.ಪಂ. ಉಪಕಾರ್ಯದರ್ಶಿ ಚಂದ್ರಶೇಖರ ಮುಂಡರಗಿ, ಮೌನೇಶ ಬಡಿಗೇರ ಮತ್ತು ಪತ್ರಕರ್ತರ ಸಂಘದ ಪದಾಧಿಕಾರಿಗಳು, ಜಿಲ್ಲೆಯ ಪತ್ರಕರ್ತರು, ವಿದ್ಯಾರ್ಥಿಗಳು ಪಾಲ್ಗೊಂಡಿದ್ದರು.

ಪ್ರಜಾ ಪಥ
PRAJA PATH Page 06
27 Feb 2026



## ಕೆ.ವಿ. ಪ್ರಭಾಕರಗೆ ಸನ್ಮಾನ...

ಗದಗ: ನಗರದ ಮಹಾತ್ಮ ಗಾಂಧಿ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ವಿಶ್ವವಿದ್ಯಾಲಯದ ಕೌಶಲ್ಯ ವಿಕಾಸ ಭವನದ ಸಭಾಂಗಣದಲ್ಲಿ ಗುರುವಾರ ನಡೆದ ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘ ಜಿಲ್ಲಾ ಘಟಕದಲ್ಲಿ ಅವ್ವ ಸೇವಾ ಟ್ರಸ್ಟ್ ಮಾತೋಶ್ರೀ ಗಂಗವ್ವ ಶಿವಲಿಂಗಪ್ಪ ಹೊರಟ್ಟಿ ಸ್ಮರಣಾರ್ಥ ರಾಜ್ಯ ಮಟ್ಟದಲ್ಲಿ ಮಹಿಳಾ ಪತ್ರಕರ್ತರಿಗೆ ಪ್ರೋತ್ಸಾಹಿಸುವ ಉದ್ದೇಶದಿಂದ ಸ್ಥಾಪಿಸಿರುವ 'ದತ್ತಿ ನಿಧಿ' ಪ್ರಶಸ್ತಿ ಪ್ರದಾನ ಹಾಗೂ ಗ್ರಾಮೀಣಾಭಿವೃದ್ಧಿಯಲ್ಲಿ ಪತ್ರಿಕೋದ್ಯಮದ ಪಾತ್ರ ಕುರಿತು ವಿಚಾರ ಸಂಕಿರಣ ಕಾರ್ಯಕ್ರಮದಲ್ಲಿ ಮುಖ್ಯಮಂತ್ರಿಗಳ ಮಾಧ್ಯಮ ಸಲಹೆಗಾರ ಕೆ.ವಿ. ಪ್ರಭಾಕರ ಅವರನ್ನು ಗದಗ ಜಿಲ್ಲಾ ಕಾನಿಪದಿಂದ ಸತ್ಕರಿಸಲಾಯಿತು. ಸಭಾಪತಿ ಬಸವರಾಜ ಹೊರಟ್ಟಿ, ವಿವಿ ಕುಲಪತಿ ಡಾ.ಸುರೇಶ ನಾಡಗೌಡರ, ಕಾನಿಪ ಜಿಲ್ಲಾಧ್ಯಕ್ಷ ರಾಜು ಎಂ. ಹೆಬ್ಬಳ್ಳಿ, ಕಾನಿಪ ರಾಜ್ಯ ಕಾರ್ಯದರ್ಶಿ ನಿಂಗಪ್ಪ ಚಾವಡಿ, ದತ್ತಿನಿಧಿ ಪ್ರಶಸ್ತಿ ಪುರಸ್ಕೃತೆ ತನುಜಾ ನಾಯಕ, ಅರುಣಕುಮಾರ ಹಿರೇಮಠ, ಶರಣು ದೊಡ್ಡೂರ, ವಾರ್ತಾಧಿಕಾರಿ ವಸಂತ ಮಡ್ಲೂರ, ಡಾ.ಬಸವರಾಜ ಧಾರವಾಡ, ಸೇರಿ ಹಲವರಿದ್ದರು.

Office : No. 130/154, Balaji Nagar, Near Ring Road, (Dhobi Ghat) Gadag-582103, Mob : 9019256545, 9448326533, Email: vijayasakshidaily@gmail.com

### 'ಅವ್ವ' ಟ್ರಸ್ಟ್ ಕೊಡಮಾಡುವ ದತ್ತಿ ಪ್ರಶಸ್ತಿ ವಿತರಿಸಿದ ಮುಖ್ಯಮಂತ್ರಿಗಳ ಮಾಧ್ಯಮ ಸಲಹೆಗಾರ ಕೆ.ವಿ. ಪ್ರಭಾಕರ ಅಭಿಮತ

# ಪತ್ರಿಕೋದ್ಯಮದ ಕನ್ನಡಿಯಲ್ಲಿ ಭಾರತದ ಹಳ್ಳಿಗಳು ಕಾಣಿಸಬೇಕು

■ ವಿಜಯಸಾಕ್ಷಿ ಸುದ್ದಿ, ಗದಗ

ತಮ್ಮ ಸುಖ ತ್ಯಾಗ ಮಾಡಿದ ತಾಯಿ-ತಂದೆ ವೃದ್ಧಾಶ್ರಮ ಕಾಣುವಂತಾಗಿರುವುದು ಬೇಸರದ ಸಂಗತಿ. ಆದರೆ ಬಸವರಾಜ ಹೊರಟ್ಟಿ ಅವರು ತಾಯಿಯ ಹೆಸರಲ್ಲಿ ಅವ್ವ ಸೇವಾ ಟ್ರಸ್ಟ್ ಸ್ಥಾಪಿಸಿ ಆ ಮೂಲಕ ಸಮಾಜದಲ್ಲಿ ವಿವಿಧ ಕಾರ್ಯಕ್ರಮಗಳ ಆಯೋಜನೆಗೆ ಕಾರಣೀಕರ್ತರಾಗಿರುವುದು ಮಾದರಿಯಾಗಿದೆ ಎಂದು ಮುಖ್ಯಮಂತ್ರಿಗಳ ಮಾಧ್ಯಮ ಸಲಹೆಗಾರ ಕೆ.ವಿ. ಪ್ರಭಾಕರ್ ಶ್ಲಾಘಿಸಿದರು.



ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘದ ಗದಗ ಜಿಲ್ಲಾ ಘಟಕದಲ್ಲಿ ಹುಬ್ಬಳ್ಳಿಯ ಅವ್ವ ಸೇವಾ ಟ್ರಸ್ಟ್ ಮಾತೋಶ್ರೀ ಗಂಗವ್ವ ಶಿವಲಿಂಗಪ್ಪ ಹೊರಟ್ಟಿ ಸ್ಮರಣಾರ್ಥ ಸ್ಥಾಪಿಸಿರುವ 2025ನೇ ಸಾಲಿನ 'ದತ್ತಿ ನಿಧಿ' ಪ್ರಶಸ್ತಿಯನ್ನು ನಗರದ ಹೊರವಲಯದಲ್ಲಿರುವ ಗ್ರಾಮ ಗಂಗೋತ್ರಿ ಆವರಣದ ಮಹಾತ್ಮ ಗಾಂಧಿ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ವಿಶ್ವವಿದ್ಯಾಲಯದ ಕೌಶಲ್ಯ ವಿಕಾಸ ಭವನದ ಸಭಾಂಗಣದಲ್ಲಿ ಗುರುವಾರ ನಡೆದ ಕಾರ್ಯಕ್ರಮದಲ್ಲಿ ಪತ್ರಕರ್ತೆ ತನುಜಾ ನಾಯಕ ಅವರಿಗೆ ಪ್ರದಾನ ಮಾಡಿ ಮಾತನಾಡಿದರು.

ಮಾತೋಶ್ರೀ ಗುರುವ್ವ ಶಿವಲಿಂಗಪ್ಪ ಹೊರಟ್ಟಿ ಈ ಕಾರ್ಯಕ್ರಮದ ನೈತಿಕ ಶಕ್ತಿಯಾಗಿದ್ದಾರೆ. ಈ ತಾಯಿಯ ಕಾಳಜಿ, ಸಂಸ್ಕಾರ ಮತ್ತು ಕನವರಿಕೆಗಳನ್ನು ಅಕ್ಷರಕ್ಕೆ ಇಳಿಸುತ್ತಾ ಇವರ ಹೆಸರಿನ ಪ್ರಶಸ್ತಿ ಸ್ವೀಕರಿಸುತ್ತಿರುವ ಸುನಂದಾ ನಾಯಕ ಅವರ ಆಯ್ಕೆ ಅತ್ಯಂತ ಸೂಕ್ತವಾಗಿದೆ. ಇವತ್ತಿನ ಈ ಕಾರ್ಯಕ್ರಮವೇ ಅವ್ವ ಗುರವ್ವ ಅವರ ಸಂಸ್ಕಾರ ಮತ್ತು ಚೈತನ್ಯದ ಜೀವಂತಿಕೆಗೆ ಸಾಕ್ಷಿಯಾಗಿದೆ ಎಂದು ಅಭಿಪ್ರಾಯಪಟ್ಟರು.

ಕೇಂದ್ರ ಸರ್ಕಾರ ನೋಟು ನಿಷೇಧ ಜಾರಿಗೆ ತಂದಾಗ ನಗರ ಕೇಂದ್ರಿತ ಆರ್ಥಿಕತೆ, ದುಡಿಮೆ ಎಲ್ಲಾ ನೆಲಕಚ್ಚಿತು. ಆದರೆ, ಇಡೀ ದೇಶದ ಆರ್ಥಿಕತೆ ಪೂರ್ತಿ ನೆಲ ಕಚ್ಚದಂತೆ ಕಾಪಾಡಿದ್ದು ನಮ್ಮ ಗ್ರಾಮೀಣ ಆರ್ಥಿಕತೆ. ಸಾಸಿವೆ ಡಬ್ಬಿ, ಎಲೆ ಅಡಿಕೆ ಚೀಲದಲ್ಲಿ ಗ್ರಾಮೀಣ ಮಹಿಳೆಯರು ಕಾಪಿಡುವ, ಉಳಿತಾಯ ಮಾಡುವ ಹಣ ಕೋವಿಡ್ ಸಂದರ್ಭದಲ್ಲಿ ಸಾವಿರಾರು ಕುಟುಂಬಗಳ ಬದುಕಿಗೆ ಆಸರೆ ಆಗಿದ್ದನ್ನು ನಾವು ನೆನಪಿಸಿಕೊಳ್ಳಬೇಕು. ಹೀಗಾಗಿ ಭಾರತದ ಗ್ರಾಮೀಣಾಭಿವೃದ್ಧಿಗೆ ಪತ್ರಿಕೋದ್ಯಮ ಸೇತುವೆಯಾಗಿ ಕೆಲಸ ಮಾಡಬೇಕಿದೆ ಎಂದರು.

ಮುಖ್ಯಮಂತ್ರಿಗಳು ಯಾವುದೇ ಜಿಲ್ಲೆಯ ಕೆಡಿಪಿ ಸಭೆಗಳನ್ನು ನಡೆಸುವಾಗ ಆಯಾ ಜಿಲ್ಲೆಗಳ ಗ್ರಾಮೀಣ ಬದುಕಿನ ಬಗ್ಗೆ ಪತ್ರಿಕೆಗಳಲ್ಲಿ ಬಂದಿರುವ ವರದಿಗಳನ್ನು ಮೊದಲು ಗಮನಿಸುತ್ತಾರೆ. ಕೊರತೆಗಳ ಬಗ್ಗೆ ವರದಿಯಾಗಿದ್ದರೆ ಸಂಬಂಧಪಟ್ಟ ಇಲಾಖೆಗಳ ಅಧಿಕಾರಿಗಳನ್ನು ಮುಖ್ಯಮಂತ್ರಿಗಳು ತರಾಟೆಗೆ ತೆಗೆದುಕೊಳ್ಳುವುದನ್ನು ನೀವೂ ಗಮನಿಸಿರುತ್ತೀರಿ.

ಕಲುಷಿತ ನೀರು ಕುಡಿದು ಸಾವನ್ನಪ್ಪಿದ ವರದಿಗಳು ಸರ್ಕಾರವನ್ನು ಎಚ್ಚರಿಸಿವೆ. ಬೆಳೆ ರೋಗದ ಬಗ್ಗೆ ಬಂದ ವರದಿಗಳು ಸಾವಿರಾರು ರೈತ ಕುಟುಂಬಗಳಿಗೆ ಪರಿಹಾರ ಒದಗಿಸಲು ನೆರವಾಗಿವೆ ಎಂದರು.

» 3ನೇ ಪುಟಕ್ಕೆ

> ಆದರ್ಶಪ್ರಾಯ ಅವ್ವನ ಹೆಸರಿನ ಪ್ರಶಸ್ತಿಗೆ ತನುಜಾ ನಾಯಕ ಅವರನ್ನು ಆಯ್ಕೆ ಮಾಡಿರುವುದು ಹೆಚ್ಚು ಸೂಕ್ತವಾಗಿದೆ. ಮಹಿಳಾ ಸಂವೇದನೆ, ಕೌಟುಂಬಿಕ ಮೌಲ್ಯಗಳು, ಸಾಮಾಜಿಕ ಜಾಗೃತಿ ಮತ್ತು ಜೀವನ ಪ್ರೀತಿಯನ್ನು ಸಾರುವಂತಹ ಲೇಖನಗಳನ್ನು ನಿರಂತರವಾಗಿ ಬರೆಯುತ್ತಿರುವ ತನುಜಾ ನಾಯಕ ಅವರ ಸಾಮಾಜಿಕ ನೋಟ ಇವತ್ತಿನ ಕಿರಿಯ ವೃತ್ತಿ ಬಾಂಧವರಿಗೆ ಮಾದರಿಯಾಗಿದ್ದಾರೆ.
>
> – ಕೆ.ವಿ. ಪ್ರಭಾಕರ,
> ಮುಖ್ಯಮಂತ್ರಿಗಳ ಮಾಧ್ಯಮ ಸಲಹೆಗಾರರು.

### ■ ಗದಗ ಜಿಲ್ಲಾ ಕಾರ್ಯನಿರತ ಪತ್ರಕರ್ತರ ಸಂಘದಿಂದ ತನುಜಾ ನಾಯಕ್‌ಗೆ ಅವ್ವ ಸೇವಾ ಟ್ರಸ್ಟ್‌ನ 2025ನೇ ಸಾಲಿನ ದತ್ತಿ ಪ್ರಶಸ್ತಿ ಪ್ರದಾನ

# 'ತಂದೆ-ತಾಯಿ' ಋಣ ತೀರಿಸಲಾಗದು: ಹೊರಟ್ಟಿ

■ ಪ್ರಜಾಪಥ ವಾರ್ತೆ

**ಗದಗ: ತಾಯಿ ಪ್ರೀತಿ ಬೆಲೆ ಕಟ್ಟಲಾಗದು. ಹೀಗಾಗಿ ಪ್ರತಿಯೊಬ್ಬರೂ ತಮ್ಮ ತಂದೆ-ತಾಯಿಯನ್ನು ಪ್ರೀತಿ, ವಾತ್ಸಲ್ಯದಿಂದ ನೋಡಿಕೊಳ್ಳಿ ಎಂದು ವಿಧಾನ ಪರಿಷತ್ ಸಭಾಪತಿ ಬಸವರಾಜ ಹೊರಟ್ಟಿ ಹೇಳಿದರು.**

ನಗರದ ಹೊರವಲಯದಲ್ಲಿ ಗ್ರಾಮ ಗಂಗೋತ್ರಿ ಆವರಣದಲ್ಲಿರುವ ಮಹಾತ್ಮ ಗಾಂಧಿ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ವಿಶ್ವವಿದ್ಯಾಲಯದ ಕೌಶಲ್ಯ ವಿಕಾಸ ಭವನದ ಸಭಾಂಗಣದಲ್ಲಿ ಗುರುವಾರ ನಡೆದ ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘ ಜಿಲ್ಲಾ ಘಟಕದಲ್ಲಿ ಅವ್ವ ಸೇವಾ ಟ್ರಸ್ಟ್ ಮಾತೋಶ್ರೀ ಗಂಗವ್ವ ಶಿವಲಿಂಗಪ್ಪ ಹೊರಟ್ಟಿ ಸ್ಮರಣಾರ್ಥ ರಾಜ್ಯ ಮಟ್ಟದಲ್ಲಿ ಮಹಿಳಾ ಪತ್ರಕರ್ತರಿಗೆ ಪ್ರೋತ್ಸಾಹಿಸುವ ಉದ್ದೇಶದಿಂದ ಸ್ಥಾಪಿಸಿರುವ 'ದತ್ತಿ ನಿಧಿ' ಪ್ರಶಸ್ತಿ ಪ್ರದಾನ ಹಾಗೂ ಗ್ರಾಮೀಣಾಭಿವೃದ್ಧಿಯಲ್ಲಿ ಪತ್ರಿಕೋದ್ಯಮದ ಪಾತ್ರ ಕುರಿತು ವಿಚಾರ ಸಂಕಿರಣ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದರು.

ಪತ್ರಕರ್ತರು ಪತ್ರಿಕೆಗಳ ಮೂಲಕ ಸಮಾಜದಲ್ಲಿ ಪರಿಣಾಮ ಬೀರುತ್ತಾರೆ. ಹೀಗಾಗಿ ಪತ್ರಿಕೆಗಳ ವರದಿ, ಮಾಹಿತಿ ಹಾಗೂ ಸಮಾಜದಲ್ಲಿ ಅತ್ಯುತ್ತಮ ಸೇವೆ ಮಾಡಿದವರನ್ನು ಗುರುತಿಸಿ ಪ್ರಶಸ್ತಿಗೆ ಆಯ್ಕೆ ಮಾಡಲಾಗುತ್ತಿದೆ. ಇದಕ್ಕೊಂದು ಪ್ರತ್ಯೇಕ ಸಮಿತಿ ರಚಿಸಿದ್ದೇವೆ. ನಮ್ಮ ತಾಯಿಯ ಸ್ಮರಣೆಯ ಹಿನ್ನೆಲೆಯಲ್ಲಿ ಪ್ರತಿವರ್ಷ ಸಾಧಕರಿಗೆ ಪ್ರಶಸ್ತಿ ನೀಡಲಾಗುತ್ತಿದೆ ಎಂದರು.

ಪ್ರಶಸ್ತಿ ಪ್ರದಾನ ಮಾಡಿದ ಮುಖ್ಯಮಂತ್ರಿಗಳ ಮಾಧ್ಯಮ ಸಲಹೆಗಾರ ಕೆ.ವಿ. ಪ್ರಭಾಕರ ಮಾತನಾಡಿ, ಅವ್ವನ ಹೆಸರಿನಲ್ಲಿ ಪ್ರಶಸ್ತಿ ನೀಡುತ್ತಿರುವುದು ರಾಜ್ಯಕ್ಕೆ ಮಾದರಿಯಾಗಿದೆ. ಎಷ್ಟೇ ದೊಡ್ಡ ಸ್ಥಾನಕ್ಕೇರಲಿ ತಾಯಿಗಿಂತ ದೊಡ್ಡದು ಯಾವುದೂ ಇಲ್ಲ. "ಅವ್ವ " ನಮ್ಮೆಲ್ಲರ ಸಾಧನೆ, ಯಶಸ್ಸಿಗೆ ಸ್ಫೂರ್ತಿ ಎಂದು ಹೇಳಿದರು.

ಅಧ್ಯಕ್ಷತೆವಹಿಸಿದ್ದ ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘದ ಗದಗ ಜಿಲ್ಲಾಧ್ಯಕ್ಷ ರಾಜು ಎಂ. ಹೆಬ್ಬಳ್ಳಿ ಅವರು ಮಾತನಾಡಿ, ಸಚಿವರಾದ ಎಚ್.ಕೆ. ಪಾಟೀಲ ಅವರು ಗದಗನಲ್ಲಿ ಕರ್ನಾಟಕದಲ್ಲಿಯೇ ಮಾದರಿ ಎನ್ನುವ ರೀತಿ ಪತ್ರಿಕಾ ಭವನ ನಿರ್ಮಾಣ ಮಾಡಿದ್ದಾರೆ. ಇದೀಗ ಮೊದಲ ಮಹಡಿಗೆ ಸಭಾಪತಿಗಳು ತಮ್ಮ ಪ್ರದೇಶಾಭಿವೃದ್ಧಿ ನಿಧಿಯಿಂದ ಅನುದಾನ ಮತ್ತು ಕೆ.ವಿ. ಪ್ರಭಾಕರ ಅವರು ಮುಖ್ಯಮಂತ್ರಿಗಳ ಮೂಲಕ ವಿಶೇಷ ಅನುದಾನ ಕೊಡಿಸುವುದರ ಜತೆಗೆ ಜಿಲ್ಲೆಯ ಕ್ಷೇಮಾಭಿವೃದ್ಧಿ ನಿಧಿಗೆ ಅನುದಾನ ಕೊಡಿಸುವಂತೆ ಮನವಿ ಮಾಡಿದರು.

ಮಹಾತ್ಮ ಗಾಂಧಿ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ವಿಶ್ವವಿದ್ಯಾಲಯ ಕುಲಪತಿ (ಪ್ರ) ಹಾಗೂ ಕುಲಸಚಿವ ಪ್ರೊ.ಸುರೇಶ ನಾಡಗೌಡರ, ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘದ ರಾಜ್ಯ ಕಾರ್ಯದರ್ಶಿ ನಿಂಗಪ್ಪ ಚಾವಡಿ, ಜಿಲ್ಲಾಮಟ್ಟದ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರ ಅಧ್ಯಕ್ಷರಾದ ಬಿ.ಬಿ ಅಸೂಟಿ, ಅವ್ವ ಸೇವಾ ಟ್ರಸ್ಟ ಜಿಲ್ಲಾ ಸಂಚಾಲಕ ಬಸವರಾಜ ಧಾರವಾಡ, ಜಿಲ್ಲಾ ವಾರ್ತಾಧಿಕಾರಿ ವಸಂತ ಮಡ್ಲೂರು, ಕಾ.ನಿ.ಪ ಸಂಘದ ರಾಜ್ಯ ಕಾರ್ಯಕಾರಣಿ ಸದಸ್ಯ ಅರುಣಕುಮಾರ ಹಿರೇಮಠ, ಜಿಲ್ಲಾ ಪ್ರಧಾನ ಕಾರ್ಯದರ್ಶಿ ಶರಣು ದೊಡ್ಡೂರ ಸೇರಿದಂತೆ ಸಂಘದ ಪದಾಧಿಕಾರಿಗಳು, ಜಿಲ್ಲೆಯ ಪತ್ರಕರ್ತರು, ವಿದ್ಯಾರ್ಥಿಗಳು ಇದ್ದರು.



> "ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘದ ಗದಗ ಜಿಲ್ಲಾ ಘಟಕದ ಪತ್ರಿಕಾ ಭವನದ ಮೊದಲ ಮಹಡಿಗೆ ಐದು ಲಕ್ಷ ರೂ. ಅನುದಾನ ನೀಡಲಾಗುವುದು.
>
> -ಬಸವರಾಜ ಹೊರಟ್ಟಿ, ಸಭಾಪತಿ

## ತಾಯಿ ಕತೆ ಹೇಳಿ ಭಾವುಕರಾದ ಬಸವರಾಜ ಹೊರಟ್ಟಿ

ಗದಗ: ದತ್ತಿ ಪ್ರಶಸ್ತಿ ಪ್ರದಾನ ಸಮಾರಂಭವನ್ನು ಉದ್ಘಾಟಿಸಿದ ವಿಧಾನ ಪರಿಷತ್ ಸಭಾಪತಿ ಬಸವರಾಜ ಹೊರಟ್ಟಿ ಅವರು ಮಾತನಾಡುವಾಗ ತಮ್ಮ ಬದುಕಿನಲ್ಲಿ ತಮ್ಮ ತಾಯಿ ಪಾತ್ರ, ಅವರ ಮಹತ್ವ ಕುರಿತು ಹೇಳುತ್ತಲೇ ಕೆಲ ಹೊತ್ತು ಭಾವುಕರಾದರು.

ಅಲ್ಲದೇ, ತಾವು ಅವ್ವ ಸೇವಾ ಟ್ರಸ್ಟ್ ಸ್ಥಾಪನೆಯ ಹಿಂದಿನ ಕತೆಯನ್ನು ವಿವರಿಸಿ, ನೆರೆದಿದ್ದವರಿಗೆ ತಂದೆ-ತಾಯಿ ಮಹತ್ವ ಕುರಿತು ಪಾಠ ಮಾಡಿದ್ದು ವಿಶೇಷವಾಗಿತ್ತು.

## ತಾಯಿ ಕತೆ ಹೇಳಿ ಭಾವುಕರಾದ ಬಸವರಾಜ ಹೊರಟ್ಟಿ

ಗದಗ: ಸಮಾರಂಭ ಉದ್ಘಾಟಿಸಿದ ಸಭಾಪತಿ ಬಸವರಾಜ ಹೊರಟ್ಟಿ ಅವರು ಮಾತನಾಡುವಾಗ ತಮ್ಮ ಬದುಕಿನಲ್ಲಿ ತಮ್ಮ ತಾಯಿ ಪಾತ್ರ, ಅವರ ಮಹತ್ವ ಕುರಿತು ಹೇಳುತ್ತಲೇ ಕೆಲ ಹೊತ್ತು ಭಾವುಕರಾದರು. ಅಲ್ಲದೇ, ತಾವು ಅವ್ವ ಸೇವಾ ಟ್ರಸ್ಟ್ ಸ್ಥಾಪನೆಯ ಹಿಂದಿನ ಕತೆಯನ್ನು ವಿವರಿಸಿ, ನೆರೆದಿದ್ದವರಿಗೆ ತಂದೆ-ತಾಯಿ ಮಹತ್ವ ಕುರಿತು ಪಾಠ ಮಾಡಿದ್ದು ವಿಶೇಷವಾಗಿತ್ತು.

## ತನುಜಾ ನಾಯಕಗೆ ಪ್ರಶಸ್ತಿ ಪ್ರದಾನ

ಗದಗ: ಹುಬ್ಬಳ್ಳಿಯ ಅವ್ವ ಸೇವಾ ಟ್ರಸ್ಟ್, ಜಿಲ್ಲಾ ಕಾರ್ಯನಿರತ ಪತ್ರಕರ್ತರ ಸಂಘದಲ್ಲಿ ಮಾತೋಶ್ರೀ ಗುರವ್ವ ಶಿವಲಿಂಗಪ್ಪ ಹೊರಟ್ಟಿ ಸ್ಮರಣಾರ್ಥ ಸ್ಥಾಪಿಸಿರುವ ದತ್ತಿ ನಿಧಿಯ 2025-26ನೇ ಸಾಲಿನ ಪ್ರಶಸ್ತಿಗೆ 'ಸಂಯುಕ್ತ ಕರ್ನಾಟಕ' ಪತ್ರಿಕೆಯ ಹಿರಿಯ ಉಪಸಂಪಾದಕಿ ತನುಜಾ ನಾಯಕ ಅವರಿಗೆ ನೀಡಿ, ಗೌರವಿಸಲಾಯಿತು.

## ಅವ್ವ ಸೇವಾ ಟ್ರಸ್ಟ್‌ನ ದತ್ತಿನಿಧಿ ಪ್ರಶಸ್ತಿ ಪ್ರದಾನ | ಮುಖ್ಯಮಂತ್ರಿಗಳ ಮಾಧ್ಯಮ ಸಲಹೆಗಾರ ಕೆ.ವಿ. ಪ್ರಭಾಕರ

# ‘ಅವ್ವ’ನ ಹೆಸರಿನಲ್ಲಿ ಮಾಡುವ ಕಾರ್ಯಕ್ರಮ ‘ಮಾದರಿ’

■ ಪ್ರಜಾಪಥ ವಾರ್ತೆ

---

**ಗದಗ: ಗದಗ: ತಮ್ಮ ಸುಖ ತ್ಯಾಗ ಮಾಡಿದ ತಾಯಿ–ತಂದೆಯರನ್ನು ವೃದ್ಧಾಶ್ರಮ ಕಾಣುವಂತಾಗಿರುವುದು ಬೇಸರದ ಸಂಗತಿ. ಆದರೆ ಬಸವರಾಜ ಹೊರಟ್ಟಿ ಅವರು ತಾಯಿ ಹೆಸರಲ್ಲಿ ಅವ್ವ ಸೇವಾ ಟ್ರಸ್ಟ್ ಸ್ಥಾಪಿಸಿ ಆ ಮೂಲಕ ಸಮಾಜದಲ್ಲಿ ವಿವಿಧ ಕಾರ್ಯಕ್ರಮಗಳ ಆಯೋಜನೆಗೆ ಕಾರಣೀಕರ್ತರಾಗಿರುವುದು ಮಾದರಿ ಎಂದು ಎಂದು ಮುಖ್ಯಮಂತ್ರಿಗಳ ಮಾಧ್ಯಮ ಸಲಹೆಗಾರ ಕೆ.ವಿ.ಪ್ರಭಾಕರ್ ಶ್ಲಾಘಿಸಿದರು.**

ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘದ ಗದಗ ಜಿಲ್ಲಾ ಘಟಕದಲ್ಲಿ ಹುಬ್ಬಳ್ಳಿಯ ಅವ್ವ ಸೇವಾ ಟ್ರಸ್ಟ್ ಮಾತೋಶ್ರೀ ಗಂಗವ್ವ ಶಿವಲಿಂಗಪ್ಪ ಹೊರಟ್ಟಿ ಸ್ಮರಣಾರ್ಥ ರಾಜ್ಯ ಮಟ್ಟದಲ್ಲಿ ಮಹಿಳಾ ಪತ್ರಕರ್ತರಿಗೆ ಪ್ರೋತ್ಸಾಹಿಸುವ ಉದ್ದೇಶದಿಂದ ಸ್ಥಾಪಿಸಿರುವ 2025 ನೇ ಸಾಲಿನ ‘ದತ್ತಿ ನಿಧಿ’ ಪ್ರಶಸ್ತಿಯನ್ನು ನಗರದ ಹೊರವಲಯದಲ್ಲಿರುವ ಗ್ರಾಮ ಗಂಗೋತ್ರಿ ಆವರಣದಲ್ಲಿರುವ ಮಹಾತ್ಮ ಗಾಂಧಿ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ವಿಶ್ವವಿದ್ಯಾಲಯದ ಕೌಶಲ್ಯ ವಿಕಾಸ ಭವನದ ಸಭಾಂಗಣದಲ್ಲಿ ಗುರುವಾರ ನಡೆದ ಕಾರ್ಯಕ್ರಮದಲ್ಲಿ ಪತ್ರಕರ್ತೆ ತನುಜಾ ನಾಯಕ ಅವರಿಗೆ ಪ್ರದಾನ ಮಾಡಿ ಮಾತನಾಡಿದರು.

ಮಾತೋಶ್ರೀ ಗುರುವ್ವ ಶಿವಲಿಂಗಪ್ಪ ಅವ್ವ ಹೊರಟ್ಟಿ ಈ ಕಾರ್ಯಕ್ರಮದ ನೈತಿಕ ಶಕ್ತಿ ಆಗಿದ್ದಾರೆ. ಈ ತಾಯಿಯ ಕಾಳಜಿ, ಸಂಸ್ಕಾರ ಮತ್ತು ಕನವ–ರಿಕೆಗಳನ್ನು ಅಕ್ಷರಕ್ಕೆ ಇಳಿಸುತ್ತಾ ಇವರ ಹೆಸರಿನ ಪ್ರಶಸ್ತಿ ಸ್ವೀಕರಿಸುತ್ತಿರುವ ಸುನಂದಾ ನಾಯಕ ಅವರ ಆಯ್ಕೆ ಅತ್ಯಂತ ಸೂಕ್ತವಾಗಿದೆ ಎಂದರು. ಇವತ್ತಿನ ಈ ಕಾರ್ಯಕ್ರಮವೇ ಅವ್ವ ಗುರವ್ವ ಅವರ ಸಂಸ್ಕಾರ ಮತ್ತು ಚೈತನ್ಯ ಜೀವಂತಿಕೆಗೆ ಸಾಕ್ಷಿಯಾಗಿದೆ ಎಂದು ವಿವರಿಸಿದರು.

ನಿಜವಾದ ಅಭಿವೃದ್ಧಿ ಎಂದರೆ ಗ್ರಾಮೀಣ ಭಾಗದ ಜನರ ಜೀವನಮಟ್ಟ ಸುಧಾರಿಸುವುದು ಮತ್ತು ಗ್ರಾಮೀಣ ಆರ್ಥಿಕತೆ ಬೆಳವಣಿಗೆಯೇ ನಿಜವಾದ ಅಭಿವೃದ್ಧಿ ಎನ್ನುವುದನ್ನು ನಾವು ಮರೆಯಬಾರದು ಎಂದರು.

ಕೇಂದ್ರ ಸರ್ಕಾರ ನೋಟು ನಿಷೇಧ ಜಾರಿಗೆ ತಂದಾಗ ನಗರ ಕೇಂದ್ರಿತ ಆರ್ಥಿಕತೆ, ದುಡಿಮೆ



> ಆದರ್ಶಪ್ರಾಯ ಅವ್ವನ ಹೆಸ–ರಿನ ಪ್ರಶಸ್ತಿಗೆ ತನುಜಾ ನಾಯಕ ಅವರನ್ನು ಆಯ್ಕೆ ಮಾಡಿರು ವುದು ಹೆಚ್ಚು ಸೂಕ್ತವಾಗಿದೆ. ಮಹಿಳಾ ಸಂವೇದನೆ, ಕೌಟುಂಬಿಕ ಮೌಲ್ಯಗಳು, ಸಾಮಾಜಿಕ ಜಾಗೃತಿ ಮತ್ತು ಜೀವನ ಪ್ರೀತಿಯನ್ನು ಸಾರುವಂತಹ ಲೇಖನ ಗಳನ್ನು ಬರೆಯು ತ್ತಿರುವ ತನುಜಾ ನಾಯಕ ಅವರ ‘ಸಾಮಾಜಿಕ ನೋಟ’ ಇವತ್ತಿನ ಕಿರಿಯ ವೃತ್ತಿ ಬಾಂಧವರಿಗೆ ಮಾದರಿಯಾಗಿದ್ದಾರೆ.
>
> –**ಕೆ.ವಿ. ಪ್ರಭಾಕರ,** ಮುಖ್ಯಮಂತ್ರಿಗಳ ಮಾಧ್ಯಮ ಸಲಹೆಗಾರ

ಎಲ್ಲಾ ನೆಲಕಚ್ಚಿತು. ಆದರೆ, ಇಡೀ ದೇಶದ ಆರ್ಥಿಕತೆ ಪೂರ್ತಿ ನೆಲ ಕಚ್ಚದಂತೆ ಕಾಪಾಡಿದ್ದು ನಮ್ಮ ಗ್ರಾಮೀಣ ಆರ್ಥಿಕತೆ. ಸಾಸಿವೆ ಡಬ್ಬಿ, ಎಲೆ ಅಡಿಕೆ ಚೀಲದಲ್ಲಿ ಗ್ರಾಮೀಣ ಮಹಿಳೆಯರು ಕಾಪಿಡುವ, ಉಳಿತಾಯ ಮಾಡುವ ಹಣ ಕೋವಿಡ್ ಸಂದರ್ಭದಲ್ಲಿ ಸಾವಿರಾರು ಕುಟುಂಬಗಳ ಬದುಕಿಗೆ ಆಸರೆ ಆಗಿದ್ದನ್ನು ನಾವು ನೆನಪಿಸಿಕೊಳ್ಳಬೇಕು ಎಂದರು.

ಹೀಗಾಗಿ ಭಾರತದ ಗ್ರಾಮೀಣಾಭಿವೃದ್ಧಿಗೆ ಪತ್ರಿಕೋದ್ಯಮ ಸೇತುವೆಯಾಗಿ ಕೆಲಸ ಮಾಡಬೇಕಿದೆ. ಪತ್ರಿಕೋದ್ಯಮವು ಮೇಲ್ಮಟ್ಟದ ಆರ್ಥಿಕ ಪ್ರಗತಿಗಿಂತ ಹೆಚ್ಚಾಗಿ, ಹಳ್ಳಿಗಳ ಜನರ ಆರೋಗ್ಯ, ಶಿಕ್ಷಣ ಮತ್ತು ಕುಡಿಯುವ ನೀರಿನ ಲಭ್ಯತೆಯ ಬಗ್ಗೆ ಗಮನ ಹರಿಸಬೇಕಿದೆ ಎಂದರು.

ಮುಖ್ಯಮಂತ್ರಿಗಳು ಯಾವುದೇ ಜಿಲ್ಲೆಯ ಏಆಕಿ ಸಭೆಗಳನ್ನು ನಡೆಸುವಾಗ ಆಯಾ ಜಿಲ್ಲೆಗಳ ಗ್ರಾಮೀಣ ಬದುಕಿನ ಬಗ್ಗೆ ಪತ್ರಿಕೆಗಳಲ್ಲಿ ಬಂದಿರುವ ವರದಿಗಳನ್ನು ಮೊದಲು ಗಮಿಸುತ್ತಾರೆ. ಇಂಥಾ ಪತ್ರಿಕೆಯಲ್ಲಿ, ಇಂಥಾ ದಿನ, ಇಂಥಾ ವರದಿ ಬಂದಿದೆ ಎಂದು ಸಂಬಂಧಪಟ್ಟ ಇಲಾಖೆಗಳ ಅಧಿಕಾರಿಗಳನ್ನು ಮುಖ್ಯಮಂತ್ರಿಗಳು ತರಾಟೆಗೆ ತೆಗೆದುಕೊಳ್ಳುವುದನ್ನು ನೀವೂ ಗಮನಿಸಿರ್ತೀರಿ.

ಕಲುಷಿತ ನೀರು ಕುಡಿದು ಸಾವನ್ನಪ್ಪಿದ ವರದಿಗಳು ಸರ್ಕಾರವನ್ನು ಎಚ್ಚರಿಸಿವೆ. ಬೆಳೆರೋಗದ ಬಗ್ಗೆ ಬಂದ ವರದಿಗಳು ಸಾವಿರಾರು ರೈತ ಕುಟುಂಬಗಳಿಗೆ ಪರಿಹಾರ ಒದಗಿಸಲು ನೆರವಾಗಿವೆ.

ಪತ್ರಕರ್ತರು, ಪತ್ರಿಕೋದ್ಯಮದ ವಿದ್ಯಾರ್ಥಿಗಳು ಹಳ್ಳಿಗಳಿಗೆ ಹೋಗಿ ಜನರ ಸಂಕಷ್ಟಗಳನ್ನು ಆಲಿಸುವುದು, ಸ್ಟುಡಿಯೋಗಳಲ್ಲಿ ಕುಳಿತು ಚರ್ಚೆ ಮಾಡುವುದಕ್ಕಿಂತ ಹಚ್ಚು ಉಪಯುಕ್ತವಾದುದು ಎನ್ನುವುದನ್ನು ಅರಿಯಬೇಕಿದೆ ಎಂದರು.

ಬರಗಾಲ ಮತ್ತು ಅತಿವೃಷ್ಟಿ ಹೆಸರಿನಲ್ಲಿ ಬರುವ ಅನುದಾನ ಹೇಗೆ ದುರುಪಯೋಗವಾಗುತ್ತದೆ ಎನ್ನುವುದನ್ನು ಗ್ರಾಮೀಣ ಪತ್ರಕರ್ತರು ಗಮನಿಸಿ ವರದಿ ಮಾಡಬೇಕು. ಇಂಥಾ ವರದಿಗಳನ್ನು ಮಾನ್ಯ ಮುಖ್ಯಮಂತ್ರಿಗಳು ಬಹಳ ಗಂಭೀರವಾಗಿ ತೆಗೆದುಕೊಳ್ಳುತ್ತಾರೆ ಎಂದರು.

ಗ್ರಾಮೀಣಾಭಿವೃದ್ಧಿಯಲ್ಲಿ ಪತ್ರಿಕೋದ್ಯಮದ ಪಾತ್ರವೆಂದರೆ, ರೈತರ ಆತ್ಮಹತ್ಯೆಯ ಹಿಂದಿನ ನೈಜ ಸಾಲದ ಬಾಧೆಯನ್ನು ಹೊರಹಾಕುವುದು, ಸರ್ಕಾರದ ನೀತಿಗಳು ಕೃಷಿಯ ಮೇಲೆ ಬೀರುತ್ತಿರುವ ದುಷ್ಪರಿಣಾಮಗಳನ್ನು ವಿಶ್ಲೇಶಿಸುವುದಾಗಿದೆ ಎಂದರು.

ಪತ್ರಿಕೋದ್ಯಮವು ಸಮಾಜದ ಕನ್ನಡಿಯಾಗಿದ್ದರೆ, ಆ ಕನ್ನಡಿಯಲ್ಲಿ ಭಾರತದ 70% ಜನಸಂಖ್ಯೆ ಇರುವ ಹಳ್ಳಿಗಳು ಕಾಣಿಸಬೇಕು. ಹೀಗಾಗಿ ಇಂಥಾ ವಿಶ್ಲೇಷಣೆಗಳು ಜನರ ಧ್ವನಿಯಾಗಿ ಗ್ರಾಮೀಣ ಭಾರತವನ್ನು ಬೆಳೆಸುಬೇಕು. ಜೊತೆಗೆ ಹಳ್ಳಿಗಳ ಕಲೆ, ಸಂಸ್ಕೃತಿ, ಭಾಷೆ ಮತ್ತು ಅಲ್ಲಿನ ಜನರ ದೈನಂದಿನ ಹೋರಾಟಗಳಿಗೂ ಕನ್ನಡಿ ಹಿಡಿಯಬೇಕು. ಈ ಕನ್ನಡಿಯಲ್ಲಿ ವಿಧಾನಸೌಧದಲ್ಲಿ ಕುಳಿತಿರುವ ಅಧಿಕಾರಿಗಳು ಮುಖ ನೋಡಿಕೊಳ್ಳಬೇಕು ಎಂದರು.

ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘದ ಗದಗ ಜಿಲ್ಲಾಧ್ಯಕ್ಷ ರಾಜು ಎಂ. ಹೆಬ್ಬಳ್ಳಿ ಅವರು ಅಧ್ಯಕ್ಷತೆವಹಿಸಿದ್ದರು. ಸಭಾಪತಿ ಬಸವರಾಜ ಹೊರಟ್ಟಿ, ಮಹಾತ್ಮ ಗಾಂಧಿ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ವಿಶ್ವವಿದ್ಯಾಲಯ ಕುಲಪತಿ (ಪ್ರ) ಹಾಗೂ ಕುಲಸಚಿವ ಪ್ರೊ.ಸುರೇಶ ನಾಡಗೌಡರ, ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘದ ರಾಜ್ಯ ಕಾರ್ಯದರ್ಶಿ ನಿಂಗಪ್ಪ ಚಾವಡಿ, ಜಿಲ್ಲಾಮಟ್ಟದ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರ ಅಧ್ಯಕ್ಷರಾದ ಬಿ.ಬಿ ಅಸೂಟಿ, ಅವ್ವ ಸೇವಾ ಟ್ರಸ್ಟ ಜಿಲ್ಲಾ ಸಂಚಾಲಕ ಬಸವರಾಜ ಧಾರವಾಡ, ದತ್ತಿ ನಿಧಿ ಪ್ರಶಸ್ತಿ ಪುರಸ್ಕೃತ ತನುಜಾ ನಾಯಕ, ಜಿಲ್ಲಾ ವಾರ್ತಾಧಿಕಾರಿ ವಸಂತ ಮಡ್ಲೂರು, ಕಾ.ನಿ.ಪ ಸಂಘದ ರಾಜ್ಯ ಕಾರ್ಯಕಾರಣಿ ಸದಸ್ಯ ಅರುಣಕುಮಾರ ಹಿರೇಮಠ, ಜಿಲ್ಲಾ ಪ್ರಧಾನ ಕಾರ್ಯದರ್ಶಿ ಶರಣು ದೊಡ್ಡೂರ ಸೇರಿದಂತೆ ಸಂಘದ ಪದಾಧಿಕಾರಿಗಳು, ಜಿಲ್ಲೆಯ ಪತ್ರಕರ್ತರು, ವಿದ್ಯಾರ್ಥಿಗಳು ಇದ್ದರು.

ಗದಗ ಜಿಲ್ಲಾ ಕಾನಿಪದಿಂದ ಪತ್ರಕರ್ತೆ ತನುಜಾ ನಾಯಕಗೆ 'ಅವ್ವ ಸೇವಾ ಟ್ರಸ್ಟ್‌ನ ದತ್ತಿ ಪ್ರಶಸ್ತಿ ಪ್ರದಾನ

# ತಂದೆ–ತಾಯಿಯನ್ನು ವಾತ್ಸಲ್ಯದಿಂದ ನೋಡಿಕೊಳ್ಳಿ

■ವಿಜಯಸಾಕ್ಷಿ ಸುದ್ದಿ, ಗದಗ

ತಾಯಿಯ ಪ್ರೀತಿಗೆ ಬೆಲೆ ಕಟ್ಟಲಾಗದು. ಹೀಗಾಗಿ ಪ್ರತಿಯೊಬ್ಬರೂ ತಮ್ಮ ತಂದೆ–ತಾಯಿಯನ್ನು ಪ್ರೀತಿ, ವಾತ್ಸಲ್ಯದಿಂದ ನೋಡಿಕೊಳ್ಳಿ ಎಂದು ವಿಧಾನ ಪರಿಷತ್ ಸಭಾಪತಿ ಬಸವರಾಜ ಹೊರಟ್ಟಿ ಹೇಳಿದರು.

ನಗರದ ಹೊರವಲಯದಲ್ಲಿ ಗ್ರಾಮ ಗಂಗೋತ್ರಿ ಆವರಣದಲ್ಲಿರುವ ಮಹಾತ್ಮ ಗಾಂಧಿ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ವಿಶ್ವವಿದ್ಯಾಲಯದ ಕೌಶಲ್ಯ ವಿಕಾಸ ಭವನದ ಸಭಾಂಗಣದಲ್ಲಿ ಗುರುವಾರ ನಡೆದ ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘ ಜಿಲ್ಲಾ ಘಟಕದಲ್ಲಿ ಅವ್ವ ಸೇವಾ ಟ್ರಸ್ಟ್ ಮಾತೋಶ್ರೀ ಗಂಗವ್ವ ಶಿವಲಿಂಗಪ್ಪ ಹೊರಟ್ಟಿ ಸ್ಮರಣಾರ್ಥ ರಾಜ್ಯ ಮಟ್ಟದಲ್ಲಿ ಮಹಿಳಾ ಪತ್ರಕರ್ತರಿಗೆ ಸ್ಥಾಪಿಸಿರುವ 'ದತ್ತಿ ನಿಧಿ' ಪ್ರಶಸ್ತಿ ಪ್ರದಾನ ಹಾಗೂ 'ಗ್ರಾಮೀಣಾಭಿವೃದ್ಧಿಯಲ್ಲಿ ಪತ್ರಿಕೋದ್ಯಮದ ಪಾತ್ರ' ಕುರಿತ ವಿಚಾರ ಸಂಕಿರಣ ಉದ್ಘಾಟಿಸಿ ಮಾತನಾಡಿದರು.



ಪತ್ರಕರ್ತರು ಪತ್ರಿಕೆಗಳ ಮೂಲಕ ಸಮಾಜದಲ್ಲಿ ಪರಿಣಾಮ ಬೀರುತ್ತಾರೆ. ಹೀಗಾಗಿ ಪತ್ರಿಕೆಗಳ ವರದಿ, ಮಾಹಿತಿ ಹಾಗೂ ಸಮಾಜದಲ್ಲಿ ಅತ್ಯುತ್ತಮ ಸೇವೆ ಮಾಡಿದವರನ್ನು ಗುರುತಿಸಿ ಪ್ರಶಸ್ತಿಗೆ ಆಯ್ಕೆ ಮಾಡಲಾಗುತ್ತಿದೆ. ಇದಕ್ಕೊಂದು ಪ್ರತ್ಯೇಕ ಸಮಿತಿ ರಚಿಸಿದ್ದೇವೆ. ನಮ್ಮ ತಾಯಿಯ ಸ್ಮರಣೆಯ ಹಿನ್ನೆಲೆಯಲ್ಲಿ ಪ್ರತಿವರ್ಷ ಸಾಧಕರಿಗೆ ಪ್ರಶಸ್ತಿ ನೀಡಲಾಗುತ್ತಿದೆ. ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘದ ಗದಗ ಜಿಲ್ಲಾ ಘಟಕದ ಪತ್ರಿಕಾ ಭವನದ ಮೊದಲ ಮಹಡಿಗೆ ಐದು ಲಕ್ಷ ರೂ. ಅನುದಾನ ನೀಡಲಾಗುವುದು ಎಂದರು.

ಪ್ರಶಸ್ತಿ ಪ್ರದಾನ ಮಾಡಿದ ಮುಖ್ಯಮಂತ್ರಿಗಳ ಮಾಧ್ಯಮ ಸಲಹೆಗಾರ ಕೆ.ವಿ. ಪ್ರಭಾಕರ ಮಾತನಾಡಿ, ಅವ್ವನ ಹೆಸರಿನಲ್ಲಿ ಪ್ರಶಸ್ತಿ ನೀಡುತ್ತಿರುವುದು ರಾಜ್ಯಕ್ಕೆ ಮಾದರಿಯಾಗಿದೆ. ಎಷ್ಟೇ ದೊಡ್ಡ ಸ್ಥಾನಕ್ಕೇರಲಿ, ತಾಯಿಗಿಂತ ದೊಡ್ಡದು ಯಾವುದೂ ಇಲ್ಲ. 'ಅವ್ವ' ನಮ್ಮೆಲ್ಲರ ಸಾಧನೆ, ಯಶಸ್ಸಿಗೆ ಸ್ಫೂರ್ತಿ ಎಂದು ಹೇಳಿದರು.

ಅಧ್ಯಕ್ಷತೆ ವಹಿಸಿದ್ದ ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘದ ಗದಗ ಜಿಲ್ಲಾಧ್ಯಕ್ಷ ರಾಜು ಎಂ.ಹೆಬ್ಬಳ್ಳಿ ಮಾತನಾಡಿ, ಸಚಿವರಾದ ಎಚ್.ಕೆ. ಪಾಟೀಲರು ಗದುಗಿನಲ್ಲಿ ಕರ್ನಾಟಕದಲ್ಲಿಯೇ ಮಾದರಿ ಎನ್ನುವ ರೀತಿ ಪತ್ರಿಕಾ ಭವನ ನಿರ್ಮಾಣ ಮಾಡಿದ್ದಾರೆ. ಇದೀಗ ಮೊದಲ ಮಹಡಿಗೆ ಸಭಾಪತಿಗಳು ತಮ್ಮ ಪ್ರದೇಶಾಭಿವೃದ್ಧಿ ನಿಧಿಯಿಂದ ಅನುದಾನ ಮತ್ತು ಕೆ.ವಿ. ಪ್ರಭಾಕರ ಅವರು ಮುಖ್ಯಮಂತ್ರಿಗಳ ಮೂಲಕ ವಿಶೇಷ ಅನುದಾನ ಕೊಡಿಸುವುದರೊಂದಿಗೆ ಜಿಲ್ಲೆಯ ಕ್ಷೇಮಾಭಿವೃದ್ಧಿ ನಿಧಿಗೆ ಅನುದಾನ ಕೊಡಿಸುವಂತೆ ಮನವಿ ಮಾಡಿದರು.

ಮಹಾತ್ಮ ಗಾಂಧಿ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ವಿಶ್ವವಿದ್ಯಾಲಯ ಕುಲಪತಿ (ಪ್ರ) ಹಾಗೂ ಕುಲಸಚಿವ ಪ್ರೊ. ಸುರೇಶ ನಾಡಗೌಡರ, ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘದ ರಾಜ್ಯ ಕಾರ್ಯದರ್ಶಿ ನಿಂಗಪ್ಪ ಚಾವಡಿ, ಜಿಲ್ಲಾಮಟ್ಟದ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಅಧ್ಯಕ್ಷ ಬಿ.ಬಿ. ಅಸೂಟಿ, ಅವ್ವ ಸೇವಾ ಟ್ರಸ್ಟ್ ಜಿಲ್ಲಾ ಸಂಚಾಲಕ ಬಸವರಾಜ ಧಾರವಾಡ, ಜಿಲ್ಲಾ ವಾರ್ತಾಧಿಕಾರಿ ವಸಂತ ಮಡ್ಲೂರು, ಕಾ.ನಿ.ಪ ಸಂಘದ ರಾಜ್ಯ ಕಾರ್ಯಕಾರಿಣಿ ಸದಸ್ಯ ಅರುಣಕುಮಾರ ಹಿರೇಮಠ, ಜಿಲ್ಲಾ ಪ್ರಧಾನ ಕಾರ್ಯದರ್ಶಿ ಶರಣು ದೊಡ್ಡೂರ ಸೇರಿದಂತೆ ಸಂಘದ ಪದಾಧಿಕಾರಿಗಳು, ಜಿಲ್ಲೆಯ ಪತ್ರಕರ್ತರು, ವಿದ್ಯಾರ್ಥಿಗಳು ಇದ್ದರು.

## ತನುಜಾ ನಾಯಕಗೆ 'ದತ್ತಿ ನಿಧಿ' ಪ್ರಶಸ್ತಿ

ಹುಬ್ಬಳ್ಳಿಯ ಅವ್ವ ಸೇವಾ ಟ್ರಸ್ಟ್ ವತಿಯಿಂದ ಜಿಲ್ಲಾ ಕಾರ್ಯನಿರತ ಪತ್ರಕರ್ತರ ಸಂಘದಲ್ಲಿ ಮಾತೋಶ್ರೀ ಗುರವ್ವ ಶಿವಲಿಂಗಪ್ಪ ಹೊರಟ್ಟಿ ಸ್ಮರಣಾರ್ಥ ಸ್ಥಾಪಿಸಿರುವ ದತ್ತಿ ನಿಧಿಯ 2025–26ನೇ ಸಾಲಿನ ಪ್ರಶಸ್ತಿಯನ್ನು 'ಸಂಯುಕ್ತ ಕರ್ನಾಟಕ' ಪತ್ರಿಕೆಯ ಹಿರಿಯ ಉಪಸಂಪಾದಕಿ ತನುಜಾ ನಾಯಕ ಅವರಿಗೆ ನೀಡಿ ಗೌರವಿಸಲಾಯಿತು.

# ತಾಯಿ ಪ್ರೀತಿಗೆ ಬೆಲೆ ಕಟ್ಟಲಾಗದು: ಹೊರಟ್ಟಿ

## ಅವ್ವ ಟ್ರಸ್ಟ್, ಜಿಲ್ಲಾ ಕಾನಿಪ ಸಂಘದಿಂದ ಪತ್ರಕರ್ತೆ ತನುಜಾಗೆ ದತ್ತಿ ಪ್ರಶಸ್ತಿ ಪ್ರದಾನ

ಪ್ರಜಾವಾಣಿ ವಾರ್ತೆ

ಗದಗ: 'ತಾಯಿ ಪ್ರೀತಿ ಬೆಲೆ ಕಟ್ಟಲಾಗದು. ಹೀಗಾಗಿ ಪ್ರತಿಯೊಬ್ಬರೂ ತಮ್ಮ ತಂದೆ-ತಾಯಿಯನ್ನು ಪ್ರೀತಿ, ವಾತ್ಸಲ್ಯದಿಂದ ನೋಡಿಕೊಳ್ಳುವ ಗುಣ ಬೆಳೆಸಿಕೊಳ್ಳಬೇಕು' ಎಂದು ವಿಧಾನ ಪರಿಷತ್ ಸಭಾಪತಿ ಬಸವರಾಜ ಹೊರಟ್ಟಿ ಹೇಳಿದರು.

ನಗರದ ಮಹಾತ್ಮಗಾಂಧಿ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ವಿಶ್ವವಿದ್ಯಾಲಯದಲ್ಲಿ ಗುರುವಾರ ನಡೆದ ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘ ಜಿಲ್ಲಾ ಘಟಕದಲ್ಲಿ ಅವ್ವ ಸೇವಾ ಟ್ರಸ್ಟ್ ಮಾತೋಶ್ರೀ ಗಂಗವ್ವ ಶಿವಲಿಂಗಪ್ಪ ಹೊರಟ್ಟಿ ಸ್ಮರಣಾರ್ಥ ಸ್ಥಾಪಿಸಿರುವ 'ದತ್ತಿ ನಿಧಿ' ಪ್ರಶಸ್ತಿ ಪ್ರದಾನ ಹಾಗೂ ಗ್ರಾಮೀಣಾಭಿವೃದ್ಧಿಯಲ್ಲಿ ಪತ್ರಿಕೋದ್ಯಮದ ಪಾತ್ರ ಕುರಿತು ವಿಚಾರ ಸಂಕಿರಣ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದರು.

'ಪತ್ರಕರ್ತರು ಪತ್ರಿಕೆಗಳ ಮೂಲಕ ಸಮಾಜದಲ್ಲಿ ಪರಿಣಾಮ ಬೀರುತ್ತಾರೆ. ಹೀಗಾಗಿ ಪತ್ರಿಕೆಗಳ ವರದಿ, ಮಾಹಿತಿ ಹಾಗೂ ಸಮಾಜದಲ್ಲಿ ಅತ್ಯುತ್ತಮ ಸೇವೆ ಮಾಡಿದವರನ್ನು ಗುರುತಿಸಿ ಪ್ರಶಸ್ತಿಗೆ ಆಯ್ಕೆ ಮಾಡಲಾಗುತ್ತಿದೆ. ಇದಕ್ಕೊಂದು ಪ್ರತ್ಯೇಕ ಸಮಿತಿ ರಚಿಸಿದ್ದೇವೆ. ನಮ್ಮ ತಾಯಿಯ ಸ್ಮರಣೆಯ ಹಿನ್ನೆಲೆಯಲ್ಲಿ ಪ್ರತಿವರ್ಷ ಸಾಧಕರಿಗೆ ಪ್ರಶಸ್ತಿ ನೀಡಲಾಗುತ್ತಿದೆ' ಎಂದರು.

> ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘದ ಗದಗ ಜಿಲ್ಲಾ ಘಟಕದ ಪತ್ರಿಕಾ ಭವನದ ಮೊದಲ ಮಹಡಿ ನಿರ್ಮಾಣಕ್ಕೆ ₹5 ಲಕ್ಷ ಅನುದಾನ ನೀಡಲಾಗುವುದು
>
> **ಬಸವರಾಜ ಹೊರಟ್ಟಿ**, ಸಭಾಪತಿ

ಪ್ರಶಸ್ತಿ ಪ್ರದಾನ ಮಾಡಿದ ಮುಖ್ಯಮಂತ್ರಿಗಳ ಮಾಧ್ಯಮ ಸಲಹೆಗಾರ ಕೆ.ವಿ. ಪ್ರಭಾಕರ ಮಾತನಾಡಿ, 'ಅವ್ವನ ಹೆಸರಿನಲ್ಲಿ ಪ್ರಶಸ್ತಿ ನೀಡುತ್ತಿರುವುದು ರಾಜ್ಯಕ್ಕೆ ಮಾದರಿಯಾಗಿದೆ. ಎಷ್ಟೇ ದೊಡ್ಡ ಸ್ಥಾನಕ್ಕೇರಲಿ ತಾಯಿಗಿಂತ ದೊಡ್ಡದು ಯಾವುದೂ ಇಲ್ಲ. 'ಅವ್ವ' ನಮ್ಮೆಲ್ಲರ ಸಾಧನೆ, ಯಶಸ್ಸಿಗೆ ಸ್ಫೂರ್ತಿ' ಎಂದು ಹೇಳಿದರು.

ಅಧ್ಯಕ್ಷತೆ ವಹಿಸಿದ್ದ ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘದ ಗದಗ ಜಿಲ್ಲಾ ಘಟಕದ ಅಧ್ಯಕ್ಷ ರಾಜು ಎಂ. ಹೆಬ್ಬಳ್ಳಿ ಮಾತನಾಡಿ, 'ಸಚಿವ ಎಚ್.ಕೆ. ಪಾಟೀಲ ಅವರು ಗದಗನಲ್ಲಿ ಕರ್ನಾಟಕದಲ್ಲಿಯೇ ಮಾದರಿ ಎನ್ನುವ ರೀತಿ ಪತ್ರಿಕಾ ಭವನ ನಿರ್ಮಾಣ ಮಾಡಿದ್ದಾರೆ. ಇದೀಗ ಮೊದಲ ಮಹಡಿಗೆ ಸಭಾಪತಿ ಹೊರಟ್ಟಿ ಅವರು ತಮ್ಮ ಪ್ರದೇಶಾಭಿವೃದ್ಧಿ ನಿಧಿಯಿಂದ ಅನುದಾನ ಮತ್ತು ಕೆ.ವಿ. ಪ್ರಭಾಕರ ಅವರು ಮುಖ್ಯಮಂತ್ರಿಗಳ ಮೂಲಕ ವಿಶೇಷ ಅನುದಾನ ಕೊಡಿಸುವುದರ ಜತೆಗೆ ಜಿಲ್ಲೆಯ ಕ್ಷೇಮಾಭಿವೃದ್ಧಿ ನಿಧಿಗೆ ಅನುದಾನ ಕೊಡಿಸಬೇಕು' ಎಂದು ಮನವಿ ಮಾಡಿದರು.

ಪ್ರಭಾರ ಕುಲಪತಿ ಪ್ರೊ.ಸುರೇಶ ವಿ. ನಾಡಗೌಡರ, ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘದ ರಾಜ್ಯ ಕಾರ್ಯದರ್ಶಿ ನಿಂಗಪ್ಪ ಚಾವಡಿ, ಜಿಲ್ಲಾ ಮಟ್ಟದ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಅಧ್ಯಕ್ಷ ಬಿ.ಬಿ. ಅಸೂಟಿ, ಅವ್ವ ಸೇವಾ ಟ್ರಸ್ಟ್ ಜಿಲ್ಲಾ ಸಂಚಾಲಕ ಬಸವರಾಜ ಧಾರವಾಡ, ವಾರ್ತಾ ಇಲಾಖೆ ಅಧಿಕಾರಿ ವಸಂತ ಮಡ್ಲೂರು, ಸಂಘದ ರಾಜ್ಯ ಕಾರ್ಯಕಾರಣಿ ಸದಸ್ಯ ಅರುಣಕುಮಾರ ಹಿರೇಮಠ, ಜಿಲ್ಲಾ ಪ್ರಧಾನ ಕಾರ್ಯದರ್ಶಿ ಶರಣು ದೊಡ್ಡೂರ ಸೇರಿದಂತೆ ಸಂಘದ ಪದಾಧಿಕಾರಿಗಳು, ಪತ್ರಕರ್ತರು, ವಿದ್ಯಾರ್ಥಿಗಳು ಇದ್ದರು.



ಸಭಾಪತಿ ಬಸವರಾಜ ಹೊರಟ್ಟಿ ಅವರು ಮಾತೋಶ್ರೀ ಗುರವ್ವ ಶಿವಲಿಂಗಪ್ಪ ಹೊರಟ್ಟಿ ಸ್ಮರಣಾರ್ಥ ಸ್ಥಾಪಿಸಿರುವ ದತ್ತಿ ನಿಧಿಯ 2025–26ನೇ ಸಾಲಿನ ಪ್ರಶಸ್ತಿಯನ್ನು ಪತ್ರಕರ್ತೆ ತನುಜಾ ನಾಯಕ ಅವರಿಗೆ ಪ್ರದಾನ ಮಾಡಲಾಯಿತು

### ತನುಜಾ ನಾಯಕಗೆ 'ದತ್ತಿ ನಿಧಿ' ಪ್ರಶಸ್ತಿ

ಹುಬ್ಬಳ್ಳಿಯ ಅವ್ವ ಸೇವಾ ಟ್ರಸ್ಟ್, ಜಿಲ್ಲಾ ಕಾರ್ಯನಿರತ ಪತ್ರಕರ್ತರ ಸಂಘದಲ್ಲಿ ಮಾತೋಶ್ರೀ ಗುರವ್ವ ಶಿವಲಿಂಗಪ್ಪ ಹೊರಟ್ಟಿ ಸ್ಮರಣಾರ್ಥ ಸ್ಥಾಪಿಸಿರುವ ದತ್ತಿ ನಿಧಿಯ 2025-26ನೇ ಸಾಲಿನ ಪ್ರಶಸ್ತಿಗೆ 'ಸಂಯುಕ್ತ ಕರ್ನಾಟಕ' ಪತ್ರಿಕೆಯ ಹಿರಿಯ ಉಪ ಸಂಪಾದಕಿ ತನುಜಾ ನಾಯಕ ಅವರಿಗೆ ನೀಡಿ, ಗೌರವಿಸಲಾಯಿತು. ಪ್ರಶಸ್ತಿಯು ₹10 ಸಾವಿರ ನಗದು, ಸ್ಮರಣಿಕೆ ಒಳಗೊಂಡಿತ್ತು.

'ಅವ್ವ'ನ ಹೆಸರಿನಲ್ಲಿ ಪ್ರಶಸ್ತಿ ಸ್ವೀಕರಿಸಿದ್ದು ಖುಷಿ ನೀಡಿದೆ' ಎಂದು ತನುಜಾ ನಾಯಕ ಹೇಳಿದರು.

ಸಭಾಪತಿ ಬಸವರಾಜ ಹೊರಟ್ಟಿ ಹೇಳಿಕೆ | ಪತ್ರಿಕಾ ಭವನದ 1ನೇ ಮಹಡಿ ನಿರ್ಮಾಣಕ್ಕೆ ಅನುದಾನ ಭರವಸೆ

# ತಾಯಿ ಋಣ ತೀರಿಸಲು ಸಾಧ್ಯವಿಲ್ಲ

■ ವಿಜಯವಾಣಿ ಸುದ್ದಿಜಾಲ ಗದಗ

ಇಂದಿನ ಸಮಾಜದಲ್ಲಿ ಮಕ್ಕಳು ತಂದೆ ತಾಯಿಯ ಬಗ್ಗೆ ಹೆಚ್ಚಿನ ಕಾಳಜಿ ಹೊಂದಬೇಕು. ಜಗತ್ತಿನಲ್ಲಿ ಶ್ರೇಷ್ಠ ವ್ಯಕ್ತಿತ್ವ ತಾಯಿ. ದೇವರಿಗಿಂತಲೂ ದೊಡ್ಡ ಸ್ಥಾನ ತಾಯಿಗೆ ಸಲ್ಲುತ್ತದೆ. ಜಗತ್ತಿನಲ್ಲಿ ಯಾರ ಋಣವನ್ನಾದರೂ ತೀರಿಸಬಹುದು. ಆದರೆ, ತಾಯಿಯ ಋಣವನ್ನು ತೀರಿಸಲು ಸಾಧ್ಯವಿಲ್ಲ ಎಂದು ಸಭಾಪತಿ ಬಸವರಾಜ ಹೊರಟ್ಟಿ ಹೇಳಿದರು.

ನಗರದ ಮಹಾತ್ಮಗಾಂಧಿ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್‌ರಾಜ್ ವಿಶ್ವವಿದ್ಯಾಲಯದಲ್ಲಿ ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘದ ಜಿಲ್ಲಾ ಘಟಕ ಹಾಗೂ ವಿಶ್ವವಿದ್ಯಾಲಯದ ಸಹಯೋಗದಲ್ಲಿ ಗುರುವಾರ ಆಯೋಜಿಸಿದ್ದ ಅವ್ವ ಸೇವಾ ಟ್ರಸ್ಟ ವತಿಯಿಂದ ಮಾತೋಶ್ರೀ ಗುರವ್ವ ಶಿವಲಿಂಗಪ್ಪ ಹೊರಟ್ಟಿ ಅವರ ಸ್ಮರಣಾರ್ಥ 2025ನೇ ಸಾಲಿನ ರಾಜ್ಯಮಟ್ಟದ ಮಹಿಳಾ ಪತ್ರಕರ್ತೆಯರಿಗೆ ದತ್ತಿನಿಧಿ ಪ್ರಶಸ್ತಿ ಪ್ರದಾನ ಹಾಗೂ ವಿಚಾರ ಸಂಕಿರಣ ಉದ್ಘಾಟಿಸಿ ಅವರು ಮಾತನಾಡಿದರು. ಸಮಾಜಮುಖಿ ಕಾರ್ಯಗಳಲ್ಲಿ ಅವ್ವ ಸೇವಾ ಟ್ರಸ್ಟ್ ನಿರಂತರವಾಗಿ ತೊಡಗಿಸಿಕೊಂಡಿದೆ. ಪ್ರತಿವರ್ಷವೂ ಸಾರ್ಥಕ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳುತ್ತಿದೆ. ಪತ್ರಿಕಾ ಭವನದ ಮೊದಲ ಮಹಡಿ ನಿರ್ಮಾಣಕ್ಕೆ 10 ಲಕ್ಷ ರೂ. ಅನುದಾನ ನೀಡುವುದಾಗಿ ಭರವಸೆ ನೀಡಿದ ಹೊರಟ್ಟಿ, ಮೊದಲ ಹಂತದಲ್ಲಿ 5 ಲಕ್ಷ ರೂ. ಬಿಡುಗಡೆ ಮಾಡುವುದಾಗಿ ಘೋಷಿಸಿದರು.

ಮುಖ್ಯಮಂತ್ರಿಗಳ ಮಾಧ್ಯಮ ಸಲಹೆಗಾರ ಕೆ.ವಿ. ಪ್ರಭಾಕರ ಮಾತನಾಡಿ, ಅಮ್ಮ ಎಂದರೆ ಶಕ್ತಿ. ಒಂಬತ್ತು ತಿಂಗಳು ಗರ್ಭದಲ್ಲಿ ಹೊತ್ತು ಹೆತ್ತ ತಾಯಿಯ ಪ್ರೀತಿ ಅಪಾರ. ತಾಯಿ ಪ್ರೀತಿಗೆ ಬೆಲೆ ಕಟ್ಟಲು ಸಾಧ್ಯವಿಲ್ಲ. ತಾನು ಹಸಿದಿದ್ದರೂ ಮಕ್ಕಳ ಹಸಿವು ನೀಗಿಸುತ್ತಾಳೆ. ಹೆತ್ತವರ ಸ್ಮರಣೆ ಪ್ರತಿಯೊಬ್ಬರ ಕರ್ತವ್ಯ ಎಂದರು.



ಗದಗದಲ್ಲಿ ಏರ್ಪಡಿಸಿದ್ದ ಕಾರ್ಯಕ್ರಮದಲ್ಲಿ ಸುಜಾತಾ ನಾಯಕ ಅವರಿಗೆ ಪ್ರಶಸ್ತಿ ಪ್ರದಾನ ಮಾಡಲಾಯಿತು. ಬಸವರಾಜ ಹೊರಟ್ಟಿ, ಕೆ.ವಿ. ಪ್ರಭಾಕರ, ಡಾ. ಸುರೇಶ ನಾಡಗೌಡರ, ಡಾ. ಬಸವರಾಜ ಧಾರವಾಡ, ಆರ್.ಎಸ್. ಬುರಡಿ, ರಾಜು ಹೆಬ್ಬಳ್ಳಿ, ಬಿ. ಬಿ. ಅಸೂಟಿ, ನಿಂಗಪ್ಪ ಚಾವಡಿ, ವಸಂತ ವಡ್ಲೂರ, ಅರುಣಕುಮಾರ ಹಿರೇಮಠ ಇತರರು ಇದ್ದರು.

ಗ್ರಾಮೀಣಾಭಿವೃದ್ಧಿ ವಿಚಾರದಲ್ಲಿ ಪತ್ರಕರ್ತರು ಹೆಚ್ಚು ಕಾಳಜಿ ವಹಿಸಬೇಕು. ಹಳ್ಳಿಗಳ ಆರ್ಥಿಕತೆ, ಕುಡಿಯುವ ನೀರು, ಶಿಕ್ಷಣ ಮತ್ತು ಮೂಲಸೌಕರ್ಯ ಸಮಸ್ಯೆಗಳ ಬಗ್ಗೆ ಆದ್ಯತೆ ನೀಡಿ ವರದಿ ಮಾಡುವುದರಿಂದ ಸರ್ಕಾರ ಗ್ರಾಮಾಭಿವೃದ್ಧಿಗೆ ಮುಂದಾಗುತ್ತದೆ. ಪತ್ರಿಕೋದ್ಯಮ ಸಮಾಜದ ಕನ್ನಡಿಯಾಗಿ, ಗ್ರಾಮೀಣ ಜನರ ಧ್ವನಿಯಾಗಿ ಕೆಲಸ ಮಾಡಬೇಕು. ಉತ್ತರ ಕರ್ನಾಟಕ ಅಭಿವೃದ್ಧಿಯಲ್ಲಿ ಹಿಂದುಳಿದಿರಬಹುದು, ಆದರೆ ಸಾಂಸ್ಕೃತಿಕ ಶ್ರೀಮಂತಿಕೆ ಅಪಾರವಾಗಿದೆ ಎಂದರು.

ಪತ್ರಿಕಾ ಭವನ ಕಟ್ಟಡ ನಿರ್ಮಾಣಕ್ಕೆ ಮುಖ್ಯಮಂತ್ರಿ ಅವರೊಂದಿಗೆ ಚರ್ಚಿಸಿ ಸರ್ಕಾರದಿಂದ ನೆರವು ದೊರಕಿಸುವುದಾಗಿ ಭರವಸೆ ನೀಡಿದರು.

ಪತ್ರಕರ್ತೆ ಸುಜಾತಾ ನಾಯಕ ಅವರಿಗೆ 2025ನೇ ಸಾಲಿನ ದತ್ತಿನಿಧಿ ಪ್ರಶಸ್ತಿ ಪ್ರದಾನ ಮಾಡಲಾಯಿತು. ಪ್ರಶಸ್ತಿ ಸ್ವೀಕರಿಸಿದ ಅವರು, ಮಹಿಳಾ ಪತ್ರಕರ್ತೆಯರನ್ನು ಪ್ರೋತ್ಸಾಹಿಸುವ ಕಾರ್ಯ ಶ್ಲಾಘನೀಯ. 'ಅವ್ವ' ಎಲ್ಲರಿಗೂ ಸ್ಫೂರ್ತಿ ಎಂದರು.

ಕುಲಪತಿ ಡಾ. ಸುರೇಶ ನಾಡಗೌಡರ ಹಾಗೂ ಡಾ. ಬಸವರಾಜ ಧಾರವಾಡ, ಪತ್ರಕರ್ತ ಸಂಘದ ಜಿಲ್ಲಾಧ್ಯಕ್ಷ ರಾಜು ಹೆಬ್ಬಳ್ಳಿ ಮಾತನಾಡಿದರು. ಡಿಡಿಪಿಐ ಆರ್.ಎಸ್. ಬುರಡಿ, ಬಿ.ಬಿ. ಅಸೂಟಿ, ನಿಂಗಪ್ಪ ಚಾವಡಿ, ವಸಂತ ವಡ್ಲೂರ, ಅರುಣಕುಮಾರ ಹಿರೇಮಠ, ಶರಣು ದೊಡ್ಡುರು, ಮಹಾಲಿಂಗಯ್ಯ ಹಿರೇಮಠ, ಆನಂದಯ್ಯ ವಿರಕ್ತಮಠ, ಮೌನೇಶ್ವರ ಬಡಿಗೇರ ಸೇರಿದಂತೆ ಪದಾಧಿಕಾರಿಗಳು, ಕಾರ್ಯಕಾರಿಣಿ ಸದಸ್ಯರು ಇತರರು ಇದ್ದರು.

# ಭಾರತದ ಗ್ರಾಮೀಣಾಭಿವೃದ್ಧಿಗೆ ಪತ್ರಿಕೋದ್ಯಮ ಸೇತುವೆಯಾಗಿ ಕೆಲಸ ಮಾಡಬೇಕು: ಕೆ.ವ್ಹಿ. ಪ್ರಭಾಕರ



ಗದಗ, ಫೆ.26. ಭಾರತದ ಗ್ರಾಮೀಣಾಭಿವೃದ್ಧಿಗೆ ಪತ್ರಿಕೋದ್ಯಮ ಸೇತುವೆಯಾಗಿ ಕೆಲಸ ಮಾಡಬೇಕಿದೆ. ಪತ್ರಿಕೋದ್ಯಮವು ಮೇಲ್ಮಟ್ಟದ ಆರ್ಥಿಕ ಪ್ರಗತಿಗಿಂತ ಹೆಚ್ಚಾಗಿ, ಹಳ್ಳಿಗಳ ಜನರ ಆರೋಗ್ಯ, ಶಿಕ್ಷಣ ಮತ್ತು ಕುಡಿಯುವ ನೀರಿನ ಲಭ್ಯತೆಯ ಬಗ್ಗೆ ಗಮನ ಹರಿಸಬೇಕಿದೆ ಎಂದು, ಮುಖ್ಯಮಂತ್ರಿಗಳ ಮಾಧ್ಯಮ ಸಲಹೆಗಾರ ಕೆ.ವ್ಹಿ. ಪ್ರಭಾಕರ ಹೇಳಿದರು.

ಅವರು ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘದ ಗದಗ ಜಿಲ್ಲಾ ಘಟಕದಲ್ಲಿ, ನಗರದ ಹೊರವಲಯದಲ್ಲಿರುವ, ಮಹಾತ್ಮ ಗಾಂಧಿ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ವಿಶ್ವವಿದ್ಯಾಲಯದ ಕೌಶಲ್ಯ ವಿಕಾಸ ಭವನದ ಸಭಾಂಗಣದಲ್ಲಿ, ಗುರುವಾರ ನಡೆದ ಕಾರ್ಯಕ್ರಮದಲ್ಲಿ ಭಾಗವಹಿಸಿ ಮಾತನಾಡಿದರು.

ನಿಜವಾದ ಅಭಿವೃದ್ಧಿ ಎಂದರೆ ಗ್ರಾಮೀಣ ಭಾಗದ ಜನರ ಜೀವನಮಟ್ಟ ಸುಧಾರಿಸುವುದು ಮತ್ತು ಗ್ರಾಮೀಣ ಆರ್ಥಿಕತೆ ಬೆಳವಣಿಗೆಯೇ, ನಿಜವಾದ ಅಭಿವೃದ್ಧಿ ಎನ್ನುವುದನ್ನು ನಾವು ಮರೆಯಬಾರದು ಎಂದರು.

ಮುಖ್ಯಮಂತ್ರಿಗಳು ಯಾವುದೇ ಜಿಲ್ಲೆಯ ಸಭೆಗಳನ್ನು ನಡೆಸುವಾಗ, ಆಯಾ ಜಿಲ್ಲೆಗಳ ಗ್ರಾಮೀಣ ಬದುಕಿನ ಬಗ್ಗೆ ಪತ್ರಿಕೆಗಳಲ್ಲಿ ಬಂದಿರುವ ವರದಿಗಳನ್ನು ಮೊದಲು ಗಮನಿಸುತ್ತಾರೆ. ಇಂಥಾ ಪತ್ರಿಕೆಯಲ್ಲಿ, ಇಂಥಾ ದಿನ, ಇಂಥಾ ವರದಿ ಬಂದಿದೆ ಎಂದು ಸಂಬಂಧಪಟ್ಟ ಇಲಾಖೆಗಳ ಅಧಿಕಾರಿಗಳನ್ನು ಮುಖ್ಯಮಂತ್ರಿಗಳು ತರಾಟೆಗೆ ತೆಗೆದುಕೊಳ್ಳುತ್ತಾರೆ.

ಪತ್ರಿಕೋದ್ಯಮವು ಸಮಾಜದ ಕನ್ನಡಿಯಾಗಿದ್ದರೆ, ಆ ಕನ್ನಡಿಯಲ್ಲಿ ಭಾರತದ 70% ಜನಸಂಖ್ಯೆ ಇರುವ ಹಳ್ಳಿಗಳು ಕಾಣಿಸಬೇಕು. ಹೀಗಾಗಿ ಇಂಥಾ ವಿಶ್ಲೇಷಣೆಗಳು ಜನರ ಧ್ವನಿಯಾಗಿ ಗ್ರಾಮೀಣ ಭಾರತವನ್ನು ಬೆಳೆಸಬೇಕು. ಜೊತೆಗೆ ಹಳ್ಳಿಗಳ ಕಲೆ, ಸಂಸ್ಕೃತಿ, ಭಾಷೆ ಮತ್ತು ಅಲ್ಲಿನ ಜನರ ದೈನಂದಿನ ಹೋರಾಟಗಳಿಗೂ ಕನ್ನಡಿ ಹಿಡಿಯಬೇಕು. ಈ ಕನ್ನಡಿಯಲ್ಲಿ ವಿಧಾನಸೌಧದಲ್ಲಿ ಕುಳಿತಿರುವ ಅಧಿಕಾರಿಗಳು ಮುಖ ನೋಡಿಕೊಳ್ಳಬೇಕು ಎಂದರು.

ಕಾ.ನಿ.ಪ. ಸಂಘದ ರಾಜ್ಯ ಕಾರ್ಯಕಾರಿಣಿ ಸದಸ್ಯರು ಸೇರಿದಂತೆ, ಸಂಘದ ಪದಾಧಿಕಾರಿಗಳು, ಜಿಲ್ಲೆಯ ಪತ್ರಕರ್ತರು, ವಿದ್ಯಾರ್ಥಿಗಳು ಇದ್ದರು.

# ಗದಗ ಜಿಲ್ಲಾ ಕಾನಿಪದಿಂದ ಪತ್ರಕರ್ತೆ ತನುಜಾ ನಾಯಕಗೆ ಅವ್ವ ಸೇವಾ ಟ್ರಸ್ಟ್‌ನ ದತ್ತಿ ಪ್ರಶಸ್ತಿ ಪ್ರದಾನ



ಪ್ರಶಸ್ತಿ ಪ್ರದಾನ ಮಾಡಿದ ಮುಖ್ಯಮಂತ್ರಿಗಳ ಮಾಧ್ಯಮ ಸಲಹೆಗಾರ ಕೆ.ವಿ. ಪ್ರಭಾಕರ ಮಾತನಾಡಿ, ಅವ್ವನ ಹೆಸರಿನಲ್ಲಿ ಪ್ರಶಸ್ತಿ ನೀಡುತ್ತಿರುವುದು ರಾಜ್ಯಕ್ಕೆ ಮಾದರಿಯಾಗಿದೆ. ತಾಯಿ ನಮ್ಮೆಲ್ಲರ ಸಾಧನೆ, ಯಶಸ್ಸಿಗೆ ಸ್ಫೂರ್ತಿ ಎಂದು ಹೇಳಿದರು.

ಮಾತೋಶ್ರೀ ಗುರುವ್ವ ಶಿವಲಿಂಗಪ್ಪ ಅವ್ವ ಹೊರಟ್ಟಿ ಈ ಕಾರ್ಯಕ್ರಮದ ನೈತಿಕ ಶಕ್ತಿ ಆಗಿದ್ದಾರೆ. ಈ ತಾಯಿಯ ಕಾಳಜಿ, ಸಂಸ್ಕಾರ ಮತ್ತು ಕನವರಿಕೆಗಳನ್ನು ಅಕ್ಷರಕ್ಕೆ ಇಳಿಸುತ್ತಾ, ಇವರ ಹೆಸರಿನ ಪ್ರಶಸ್ತಿ ಸ್ವೀಕರಿಸುತ್ತಿರುವ ಸುನಂದಾ ನಾಯಕ ಅವರ ಆಯ್ಕೆ ಅತ್ಯಂತ ಸೂಕ್ತವಾಗಿದೆ ಎಂದರು. ಮಹಿಳಾ ಸಂವೇದನೆ, ಕೌಟುಂಬಿಕ ಮೌಲ್ಯಗಳು, ಸಾಮಾಜಿಕ ಜಾಗೃತಿ ಮತ್ತು ಜೀವನ ಪ್ರೀತಿಯನ್ನು ಸಾರುವಂತಹ ಲೇಖನಗಳನ್ನು ನಿರಂತರವಾಗಿ ಬರೆಯುತ್ತಿರುವ ತನುಜಾ ನಾಯಕ ಅವರ ಸಾಮಾಜಿಕ ನೋಟ ಇವತ್ತಿನ ಕಿರಿಯ ವೃತ್ತಿ ಬಾಂಧವರಿಗೆ ಮಾದರಿಯಾಗಿದ್ದಾರೆ. ತಮ್ಮ ಸುಖ ತ್ಯಾಗ ಮಾಡಿದ ತಾಯಿ-ತಂದೆಯರನ್ನು ವೃದ್ಧಾಶ್ರಮ ಕಾಣುವಂತಾಗಿರುವುದು ಬೇಸರದ ಸಂಗತಿ. ಆದರೆ ಬಸವರಾಜ ಹೊರಟ್ಟಿ ಅವರು ತಾಯಿ ಹೆಸರಲ್ಲಿ ಅವ್ವ ಸೇವಾ ಟ್ರಸ್ಟ್ ಸ್ಥಾಪಿಸಿ, ಆ ಮೂಲಕ ಸಮಾಜದಲ್ಲಿ ವಿವಿಧ ಕಾರ್ಯಕ್ರಮಗಳ ಆಯೋಜನೆಗೆ ಕಾರಣೀಕರ್ತರಾಗಿರುವುದು ಮಾದರಿ ಎಂದು, ಮುಖ್ಯಮಂತ್ರಿಗಳ ಮಾಧ್ಯಮ ಸಲಹೆಗಾರ ಕೆ.ವಿ. ಪ್ರಭಾಕರ್ ಶ್ಲಾಘಿಸಿದರು.

ಅಧ್ಯಕ್ಷತೆ ವಹಿಸಿದ್ದ ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘದ ಗದಗ ಜಿಲ್ಲಾಧ್ಯಕ್ಷ ರಾಜು ಎಂ. ಹೆಬ್ಬಳ್ಳಿ ಅವರು ಮಾತನಾಡಿ, ಸಚಿವರಾದ ಎಚ್.ಕೆ. ಪಾಟೀಲ ಅವರು ಗದಗನಲ್ಲಿ ಕರ್ನಾಟಕದಲ್ಲಿಯೇ ಮಾದರಿ ಎನ್ನುವ ರೀತಿ ಪತ್ರಿಕಾ ಭವನ ನಿರ್ಮಾಣ ಮಾಡಿದ್ದಾರೆ. ಇದೀಗ ಮೊದಲ ಮಹಡಿಗೆ ಸಭಾಪತಿಗಳು ತಮ್ಮ ಪ್ರದೇಶಾಭಿವೃದ್ಧಿ ನಿಧಿಯಿಂದ ಅನುದಾನ ಮತ್ತು ಕೆ.ವಿ. ಪ್ರಭಾಕರ ಅವರು ಮುಖ್ಯಮಂತ್ರಿಗಳ ಮೂಲಕ ವಿಶೇಷ ಅನುದಾನ ಕೊಡಿಸುವುದರ ಜೊತೆಗೆ, ಜಿಲ್ಲೆಯ ಕ್ಷೇಮಾಭಿವೃದ್ಧಿ ನಿಧಿಗೆ ಅನುದಾನ ಕೊಡಿಸುವಂತೆ ಮನವಿ ಮಾಡಿದರು.

ಮಹಾತ್ಮ ಗಾಂಧಿ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ವಿಶ್ವವಿದ್ಯಾಲಯ ಕುಲಪತಿ (ಪ್ರ) ಹಾಗೂ ಕುಲಸಚಿವ ಪ್ರೊ.ಸುರೇಶ ನಾಡಗೌಡರ, ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘದ ರಾಜ್ಯ ಕಾರ್ಯದರ್ಶಿ ನಿಂಗಪ್ಪ ಚಾವಡಿ, ಜಿಲ್ಲಾಮಟ್ಟದ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರ ಅಧ್ಯಕ್ಷರಾದ ಬಿ.ಬಿ ಅಸೂಟಿ, ಅವ್ವ ಸೇವಾ ಟ್ರಸ್ಟ ಜಿಲ್ಲಾ ಸಂಚಾಲಕ ಬಸವರಾಜ ಧಾರವಾಡ, ಜಿಲ್ಲಾ ವಾರ್ತಾಧಿಕಾರಿ ವಸಂತ ಮಡ್ಲೂರು, ಕಾ.ನಿ.ಪ. ಸಂಘದ ರಾಜ್ಯ ಕಾರ್ಯಕಾರಣಿ ಸದಸ್ಯ ಅರುಣಕುಮಾರ ಹಿರೇಮಠ, ಜಿಲ್ಲಾ ಪ್ರಧಾನ ಕಾರ್ಯದರ್ಶಿ ಶರಣು ದೊಡ್ಡೂರ ಸೇರಿದಂತೆ, ಸಂಘದ ಪದಾಧಿಕಾರಿಗಳು, ಜಿಲ್ಲೆಯ ಪತ್ರಕರ್ತರು, ವಿದ್ಯಾರ್ಥಿಗಳು ಇದ್ದರು.

## ಮುಖ್ಯಮಂತ್ರಿಗಳ ಮಾಧ್ಯಮ ಸಲಹೆಗಾರ ಕೆ.ವಿ. ಪ್ರಭಾಕರ ಅಭಿಮತ

# ಗ್ರಾಮೀಣಾಭಿವೃದ್ಧಿಗೆ ಪತ್ರಿಕೋದ್ಯಮ ಸೇತುವೆಯಾಗಿ ಕೆಲಸ ಮಾಡಬೇಕು

■ ಕಿತ್ತೂರ ಕರ್ನಾಟಕ ವಾರ್ತೆ



**ಗದಗ, ೨೬ :** ತಮ್ಮ ಸುಖ ತ್ಯಾಗ ಮಾಡಿದ ತಾಯಿ-ತಂದೆಯರು ವೃದ್ಧಾಶ್ರಮ ಕಾಣುವಂತಾಗಿರುವುದು ಬೇಸರದ ಸಂಗತಿ. ಆದರೆ ಬಸವರಾಜ ಹೊರಟ್ಟಿ ಅವರು ತಾಯಿ ಹೆಸರಲ್ಲಿ ಅವ್ವ ಸೇವಾ ಟ್ರಸ್ಟ್ ಸ್ಥಾಪಿಸಿ ಆ ಮೂಲಕ ಸಮಾಜದಲ್ಲಿ ವಿವಿಧ ಕಾರ್ಯಕ್ರಮಗಳ ಆಯೋಜನೆಗೆ ಕಾರಣೀಕರ್ತರಾಗಿರುವುದು ಮಾದರಿ ಎಂದು ಎಂದು ಮುಖ್ಯಮಂತ್ರಿಗಳ ಮಾಧ್ಯಮ ಸಲಹೆಗಾರ ಕೆ.ವಿ.ಪ್ರಭಾಕರ್ ಶ್ಲಾಘಿಸಿದರು.

ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘದ ಗದಗ ಜಿಲ್ಲಾ ಘಟಕದಲ್ಲಿ ಹುಬ್ಬಳ್ಳಿಯ ಅವ್ವ ಸೇವಾ ಟ್ರಸ್ಟ್ ಮಾತೋಶ್ರೀ ಗಂಗವ್ವ ಶಿವಲಿಂಗಪ್ಪ ಹೊರಟ್ಟಿ ಸ್ಮರಣಾರ್ಥ ರಾಜ್ಯ ಮಟ್ಟದಲ್ಲಿ ಮಹಿಳಾ ಪತ್ರಕರ್ತರಿಗೆ ಪ್ರೋತ್ಸಾಹಿಸುವ ಉದ್ದೇಶದಿಂದ ಸ್ಥಾಪಿಸಿರುವ ೨೦೨೫ ನೇ ಸಾಲಿನ 'ದತ್ತಿ ನಿಧಿ' ಪ್ರಶಸ್ತಿಯನ್ನು ನಗರದ ಹೊರವಲಯದಲ್ಲಿರುವ ಗ್ರಾಮ ಗಂಗೋತ್ರಿ ಆವರಣದಲ್ಲಿರುವ ಮಹಾತ್ಮ ಗಾಂಧಿ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ವಿಶ್ವವಿದ್ಯಾಲಯದ ಕೌಶಲ್ಯ ವಿಕಾಸ ಭವನದ ಸಭಾಂಗಣದಲ್ಲಿ ಗುರುವಾರ ನಡೆದ ಕಾರ್ಯಕ್ರಮದಲ್ಲಿ ಪತ್ರಕರ್ತೆ ತನುಜಾ ನಾಯಕ ಅವರಿಗೆ ಪ್ರದಾನ ಮಾಡಿ ಮಾತನಾಡಿದರು.

ಭಾರತದ ಗ್ರಾಮೀಣಾಭಿವೃದ್ಧಿಗೆ ಪತ್ರಿಕೋದ್ಯಮ ಸೇತುವೆಯಾಗಿ ಕೆಲಸ ಮಾಡಬೇಕಿದೆ. ಪತ್ರಿಕೋದ್ಯಮವು ಮೇಲ್ಮಟ್ಟದ ಆರ್ಥಿಕ ಪ್ರಗತಿಗಿಂತ ಹೆಚ್ಚಾಗಿ, ಹಳ್ಳಿಗಳ ಜನರ ಆರೋಗ್ಯ, ಶಿಕ್ಷಣ ಮತ್ತು ಕುಡಿಯುವ ನೀರಿನ ಲಭ್ಯತೆಯ ಬಗ್ಗೆ ಗಮನ ಹರಿಸಬೇಕಿದೆ ಎಂದರು. ಮುಖ್ಯಮಂತ್ರಿಗಳು ಯಾವುದೇ ಜಿಲ್ಲೆಯ ಏಆಕಿ ಸಭೆಗಳನ್ನು ನಡೆಸುವಾಗ ಆಯಾ ಜಿಲ್ಲೆಗಳ ಗ್ರಾಮೀಣ ಬದುಕಿನ ಬಗ್ಗೆ ಪತ್ರಿಕೆಗಳಲ್ಲಿ ಬಂದಿರುವ ವರದಿಗಳನ್ನು ಮೊದಲು ಗಮಿಸುತ್ತಾರೆ. ಇಂಥಾ ಪತ್ರಿಕೆಯಲ್ಲಿ, ಇಂಥಾ ದಿನ, ಇಂಥಾ ವರದಿ ಬಂದಿದೆ ಎಂದು ಸಂಬಂಧಪಟ್ಟ ಇಲಾಖೆಗಳ ಅಧಿಕಾರಿಗಳನ್ನು ಮುಖ್ಯಮಂತ್ರಿಗಳು ತರಾಟೆಗೆ ತೆಗೆದುಕೊಳ್ಳುವುದನ್ನು ನೀವೂ ಗಮನಿಸಿರ್ತೀರಿ. ಕಲುಷಿತ ನೀರು ಕುಡಿದು ಸಾವನ್ನಪ್ಪಿದ ವರದಿಗಳು ಸರ್ಕಾರವನ್ನು ಎಚ್ಚರಿಸಿವೆ. ಬೆಳೆರೋಗದ ಬಗ್ಗೆ ಬಂದ ವರದಿಗಳು ಸಾವಿರಾರು ರೈತ ಕುಟುಂಬಗಳಿಗೆ ಪರಿಹಾರ ಒದಗಿಸಲು ನೆರವಾಗಿವೆ. ಪತ್ರಕರ್ತರು, ಪತ್ರಿಕೋದ್ಯಮದ ವಿದ್ಯಾರ್ಥಿಗಳು ಹಳ್ಳಿಗಳಿಗೆ ಹೋಗಿ ಜನರ ಸಂಕಷ್ಟಗಳನ್ನು ಆಲಿಸುವುದು, ಸ್ಟುಡಿಯೋಗಳಲ್ಲಿ ಕುಳಿತು ಚರ್ಚೆ ಮಾಡುವುದಕ್ಕಿಂತ ಹೆಚ್ಚು ಉಪಯುಕ್ತವಾದುದು ಎನ್ನುವುದನ್ನು ಅರಿಯಬೇಕಿದೆ ಎಂದರು. ಬರಗಾಲ ಮತ್ತು ಅತಿವೃಷ್ಟಿ ಹೆಸರಿನಲ್ಲಿ ಬರುವ ಅನುದಾನ ಹೇಗೆ ದುರುಪಯೋಗವಾಗುತ್ತದೆ ಎನ್ನುವುದನ್ನು ಗ್ರಾಮೀಣ ಪತ್ರಕರ್ತರು ಗಮನಿಸಿ ವರದಿ ಮಾಡಬೇಕು. ಇಂಥಾ ವರದಿಗಳನ್ನು ಮಾನ್ಯ ಮುಖ್ಯಮಂತ್ರಿಗಳು ಬಹಳ ಗಂಭೀರವಾಗಿ ತೆಗೆದುಕೊಳ್ಳುತ್ತಾರೆ ಎಂದರು. ಗ್ರಾಮೀಣಾಭಿವೃದ್ಧಿಯಲ್ಲಿ ಪತ್ರಿಕೋದ್ಯಮದ ಪಾತ್ರವೆಂದರೆ, ರೈತರ ಆತ್ಮಹತ್ಯೆಯ ಹಿಂದಿನ ನೈಜ ಸಾಲದ ಬಾಧೆಯನ್ನು ಹೊರಹಾಕುವುದು, ಸರ್ಕಾರದ ನೀತಿಗಳು ಕೃಷಿಯ ಮೇಲೆ ಬೀರುತ್ತಿರುವ ದುಷ್ಪರಿಣಾಮಗಳನ್ನು ವಿಶ್ಲೇಶಿಸುವುದಾಗಿದೆ ಎಂದರು. ಪತ್ರಿಕೋದ್ಯಮವು ಸಮಾಜದ ಕನ್ನಡಿಯಾಗಿದ್ದರೆ, ಆ ಕನ್ನಡಿಯಲ್ಲಿ ಭಾರತದ ೭೦% ಜನಸಂಖ್ಯೆ ಇರುವ ಹಳ್ಳಿಗಳು ಕಾಣಿಸಬೇಕು. ಹೀಗಾಗಿ ಇಂಥಾ ವಿಶ್ಲೇಷಣೆಗಳು ಜನರ ಧ್ವನಿಯಾಗಿ ಗ್ರಾಮೀಣ ಭಾರತವನ್ನು ಬೆಳೆಸುಬೇಕು. ಜೊತೆಗೆ ಹಳ್ಳಿಗಳ ಕಲೆ, ಸಂಸ್ಕೃತಿ, ಭಾಷೆ ಮತ್ತು ಅಲ್ಲಿನ ಜನರ ದೈನಂದಿನ ಹೋರಾಟಗಳಿಗೂ ಕನ್ನಡಿ ಹಿಡಿಯಬೇಕು. ಈ ಕನ್ನಡಿಯಲ್ಲಿ ವಿಧಾನಸೌಧದಲ್ಲಿ ಕುಳಿತಿರುವ ಅಧಿಕಾರಿಗಳು ಮುಖ ನೋಡಿಕೊಳ್ಳಬೇಕು ಎಂದರು. ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘದ ಗದಗ ಜಿಲ್ಲಾಧ್ಯಕ್ಷ ರಾಜು ಎಂ. ಹೆಬ್ಬಳ್ಳಿ ಅವರು ಅಧ್ಯಕ್ಷತೆವಹಿಸಿದ್ದರು. ಸಭಾಪತಿ ಬಸವರಾಜ ಹೊರಟ್ಟಿ, ಮಹಾತ್ಮ ಗಾಂಧಿ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ವಿಶ್ವವಿದ್ಯಾಲಯ ಕುಲಪತಿ (ಪ್ರ) ಹಾಗೂ ಕುಲಸಚಿವ ಪ್ರೊ.ಸುರೇಶ ನಾಡಗೌಡರ, ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘದ ರಾಜ್ಯ ಕಾರ್ಯದರ್ಶಿ ನಿಂಗಪ್ಪ ಚಾವಡಿ, ಜಿಲ್ಲಾಮಟ್ಟದ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರ ಅಧ್ಯಕ್ಷರಾದ ಬಿ.ಬಿ ಅಸೂಟಿ, ಅವ್ವ ಸೇವಾ ಟ್ರಸ್ಟ ಜಿಲ್ಲಾ ಸಂಚಾಲಕ ಬಸವರಾಜ ಧಾರವಾಡ, ದತ್ತಿ ನಿಧಿ ಪ್ರಶಸ್ತಿ ಪುರಸ್ಕೃತ ತನುಜಾ ನಾಯಕ, ಜಿಲ್ಲಾ ವಾರ್ತಾಧಿಕಾರಿ ವಸಂತ ಮಡ್ಲೂರು, ಕಾ.ನಿ.ಪ ಸಂಘದ ರಾಜ್ಯ ಕಾರ್ಯಕಾರಣಿ ಸದಸ್ಯ ಅರುಣಕುಮಾರ ಹಿರೇಮಠ, ಜಿಲ್ಲಾ ಪ್ರಧಾನ ಕಾರ್ಯದರ್ಶಿ ಶರಣು ದೊಡ್ಡೂರ ಸೇರಿದಂತೆ ಸಂಘದ ಪದಾಧಿಕಾರಿಗಳು, ಜಿಲ್ಲೆಯ ಪತ್ರಕರ್ತರು, ವಿದ್ಯಾರ್ಥಿಗಳು ಇದ್ದರು.